ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 79 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 03–10–2023 ಮಂಗಳವಾರ ಪುಟ: 4 ಬೆಲೆ : ರೂ.2–00
Volume - 01 Issue - 79 Title- Code: KARKAN 28269 Chitradurga Date: 03-10-2023 Tuesday Page: 4 Price: Rs. 2-00

ಒಳಪುಟದ ಸುದ್ದಿಗಳು
ಬ್ರಿಟೀಷರಿಂದ ಭಾರತೀಯರಿಗೆ ಮುಕ್ತಿ ಕೊಡಿಸಿದ ಕೀರ್ತಿ ಗಾಂಧೀಜಿಯವರದ್ದು: ಬಿ.ರಘುಮೂರ್ತಿ 2
ಶಾಮನೂರು ಶಿವಶಂಕರಪ್ಪ, ಸಿಎಂ ಮಾತನಾಡಿ ಸರಿಪಡಿಸಿಕೊಳ್ಳುತ್ತಾರೆ 3
ಸ್ವಚ್ಛ ಭಾರತ ಅಭಿಯಾನಕ್ಕೆ ಮಾಜಿ ಶಾಸಕ ತಿಪ್ಪಾರೆಡ್ಡಿ ಚಾಲನೆ 4

ಸುದ್ದಿ, ಜಾಹಿರಾತಿಗೆ 9686622252

ಫಾಸ್ಟ್ ನ್ಯೂಸ್

ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ

ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡ. ಸುಧಾಕರ್ ಅವರು ಅ. 03 ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ ಯೋಜನೆ ಕುರಿತಂತೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಜಿಲ್ಲಾಮಟ್ಟದಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್‌ನ ಸಭೆ ಕೈಗೊಳ್ಳುವರು. ಮಧ್ಯಾಹ್ನ 01 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣಕ್ಕೆ ಆಗಮಿಸಿ, ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಬಳಿಕ ಸಚಿವರು ಬೆಂಗಳೂರಿಗೆ ಪ್ರಯಾಣ ಬೆಳೆಸುವರು.

ಅ.1 ರಿಂದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ನಾಮನಿರ್ದೇಶನ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2023ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿಗೆ ವಿವಿಧ ಕ್ಷೇತ್ರಗಳ ಸಾಧಕರ ಹೆಸರುಗಳನ್ನು ಸಾರ್ವಜನಿಕರು ಸೇವಾ ಸಿಂಧು ಪೋರ್ಟಲ್ ನಲ್ಲಿ ನಾಮನಿರ್ದೇಶನ ಮಾಡಬಹುದಾಗಿದೆ. ನಾಮನಿರ್ದೇಶನದ ಅವಧಿಯು ಅಕ್ಟೋಬರ್ 1 ರಿಂದ ಪ್ರಾರಂಭವಾಗಿ ಅಕ್ಟೋಬರ್ 15 ಕಡೆಯ ದಿನವಾಗಿದೆ. https://Sevasindhu.karnataka.gov.in ಸೇವಾ ಸಿಂಧು ಪೋರ್ಟಲ್‌ನ ವೆಬ್‌ಸೈಟ್‌ನಲ್ಲಿ ಸಾರ್ವಜನಿಕರು ನಾಮನಿರ್ದೇಶನ ಮಾಡಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

ಗಾಂಧಿ, ಶಾಸ್ತ್ರಿ ಅಂತಃಶಕ್ತಿ ಪ್ರತೀಕ: ಡಿಸಿ

» ಚಿತ್ರದುರ್ಗ

ಅಂತಃಶಕ್ತಿ ಜಾಗೃತಗೊಳಿಸಿ ಉತ್ತಮ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜಗತ್ತಿಗೆ ಮಾದರಿಯಾಗಬಹುದು. ಅದಕ್ಕೆ ಮಹಾತ್ಮಾ ಗಾಂಧೀಜಿಯವರೇ ಉತ್ತಮ ನಿದರ್ಶನ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್. ಜೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಮಹಾತ್ಮ ಗಾಂಧೀಜಿಯವರ 154ನೇ ಜನ್ಮ ದಿನಾಚರಣೆ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 120ನೇ ಜನ್ಮ ದಿನಾಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ಭೌತಿಕ ಲಕ್ಷಣಗಳನ್ನು ಆಧರಿಸಿ ಜಗತ್ತು ನಮ್ಮನ್ನು ಗೌರವಿಸುತ್ತದೆ ಎಂಬುದು ಸುಳ್ಳು. ಗಾಂಧೀಜಿಯವರು ತುಂಡು ಬಟ್ಟೆ ತೊಟ್ಟು, ಕೈಯಲ್ಲಿ ಊರುಗೋಲು ಹಿಡಿದು ದೇಶ ಸುತ್ತಿ, ಅವರ ತತ್ವ ಹಾಗೂ ಆಲೋಚನೆಗಳಿಂದ ಭಾರತೀಯರನ್ನು ಆಕರ್ಷಿಸಿ ಬ್ರಿಟೀಷರ ವಿರುದ್ಧ ಒಗ್ಗೂಡಿಸಿದರು. ಲಾಲ್ ಬಹದ್ದೂರ್ ಶಾಸ್ತ್ರಿಯವರು ತಮ್ಮ ದೈಹಿಕ ಎತ್ತರದ ಬಗ್ಗೆ ಕೀಳರಿಮೆ ಹೊಂದದೆ, ದೇಶದ ಎರಡನೇ ಪ್ರಧಾನ ಮಂತ್ರಿಯಾಗಿ ದೇಶವನ್ನು ಸಂಕಷ್ಟ ಸಮಯದಲ್ಲಿ ಮುಂದುವರೆಸಿದರು. ಈ ಇಬ್ಬರೂ ಮಹನೀಯರು ಅವರೊಳಗಿನ ಅಂತಃಶಕ್ತಿ ಪ್ರತೀಕವಾಗಿ ನಮ್ಮೆಲ್ಲರಿಗೂ ಮಾದರಿಯಾಗಿದ್ದಾರೆ ಎಂದರು.

ನಮ್ಮಲ್ಲಿ ಅಂತಃಶಕ್ತಿಯ ಕೊರತೆಯಿದ್ದಾಗ ನಾವು ಬಾಹ್ಯವಾಗಿ ಒಳ್ಳೆಯ ಬಟ್ಟೆ, ಆಭರಣ ಅಥವಾ ಅಲಂಕಾರದಿಂದ ಸಮಾಜದಲ್ಲಿ ನಮ್ಮ ಗೌರವವನ್ನು ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೇವೆ. ಆದರೆ ಗಾಂಧೀಜಿ ಎಂದಿಗೂ ತಮ್ಮ ಬಾಹ್ಯ ನೋಟದ ಬಗ್ಗೆ ತಲೆ ಕೆಡಿಸಿಕೊಳ್ಳದೇ, ತಮ್ಮ ಅಂತಃಶಕ್ತಿಯನ್ನು ಸದಾ ಹೆಚ್ಚಿಸಿಕೊಳ್ಳುವಲ್ಲಿ ತೊಡಗಿದ್ದರು. ತಮ್ಮ ತತ್ವ ವಿಚಾರಗಳಿಂದ ದೇಶದ ಕೋಟ್ಯಾಂತರ ಜನರನ್ನು ಮುನ್ನಡೆಸಿದರು. ಹಾಗೆಯೇ ದೇಶದ ಪ್ರಧಾನಮಂತ್ರಿಯಾಗಿದ್ದ ಲಾಲ್ ಬಹದ್ದೂರ್ ಶಾಸ್ತ್ರಿಯವರು ಎಂದಿಗೂ ತಮ್ಮ ದೈಹಿಕ ಎತ್ತರದ ಬಗ್ಗೆ ಕೀಳರಿಮೆ ಹೊಂದಿರಲಿಲ್ಲ, ಬದಲಾಗಿ ತಮ್ಮ ಋಣಾತ್ಮಕ ಅಂಶಗಳನ್ನು ಮರೆತು, ಅದನ್ನೇ ಧನಾತ್ಮಕ ಅಂಶವಾಗಿಸುವತ್ತ ಚಿಂತಿಸಿದರು. ಇದರಿಂದ ಜೀವನದಲ್ಲಿ ಉತ್ತಮ ಯಶಸ್ಸು ಗಳಿಸಿದರು. ಶಾಸ್ತ್ರಿಯವರ ಧೈರ್ಯ, ದೇಶಪ್ರೇಮ, ಪ್ರಾಮಾಣಿಕತೆಯನ್ನು ಇಡೀ ದೇಶ ಕೊಂಡಾಡುತ್ತದೆ ಎಂದರು.

ಬಹಳಷ್ಟು ಜನರು ಉಪದೇಶಗಳನ್ನು ಬೋಧಿಸುತ್ತಾರೆ. ಆದರೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದಿಲ್ಲ. ಗಾಂಧೀಜಿ ಹೀಗೆ ಇರಲಿಲ್ಲ. ಅವರು ಬೋಧಿಸಿ ಎಲ್ಲಾ ತತ್ವಗಳನ್ನು ತಮ್ಮ ಜೀವನದಲ್ಲಿ ಅಳವಡಿಕೊಂಡು ಚಾಚು ತಪ್ಪದೇ ಪಾಲಿಸಿಕೊಂಡು ಬಂದರು. ಹಾಗಾಗಿಯೇ ಅವರನ್ನು ರಾಷ್ಟ್ರಪಿತ ಎಂದು ಕರೆದು ಗೌರವಿಸಲಾಗುತ್ತಿದೆ. ಗಾಂಧೀಜಿ ಹಾಗೂ ಜರ್ಮನಿಯ ಹಿಟ್ಲರ್ ಒಂದೇ ಕಾಲಘಟ್ಟದಲ್ಲಿ ಜೀವಿಸಿದ್ದರು. ಆದರೆ ಗಾಂಧೀಜಿಯವರು ಜನತೆಯ ಮೇಲೆ ಬೀರಿದ ಪರಿಣಾಮ ಹಾಗೂ ಹಿಟ್ಲರ್ ಸರ್ವಾಧಿಕಾರಿ ಧೋರಣೆಗೂ ತುಂಬಾ ವ್ಯತ್ಯಾಸವಿದೆ. ಹಿಟ್ಲರ್ ಬಗ್ಗೆ ಜನರಲ್ಲಿ ಇದಿದ್ದು ಭಯ, ಆದರೆ ಗಾಂಧೀಜಿ ಬಗ್ಗೆ ಭಾರತೀಯರಲ್ಲಿ ಇದ್ದಿದ್ದು ಪ್ರೀತಿ. ಗಾಂಧೀಜಿ ಎಂದಿಗೂ ಸ್ವಾರ್ಥ ಚಿಂತನೆ ಮಾಡಲಿಲ್ಲ. ಸತ್ಯ, ಅಹಿಂಸೆ, ಸರ್ವಧರ್ಮ ಸಮನ್ವಯತೆ ಪಾಲಿಸಿದರು. ಪ್ರತಿಯೊಬ್ಬರು ತಮ್ಮ ಜೀವನದಲ್ಲಿನ ಕೊರತೆಗಳ ಬಗ್ಗೆ ಚಿಂತಿಸದೇ, ತಮ್ಮಲ್ಲಿನ ಶಕ್ತಿಯ ಬಗ್ಗೆ ಧನಾತ್ಮಕವಾಗಿ ಚಿಂತಿಸಿದರೆ ಜೀವನದಲ್ಲಿ ಉತ್ತುಂಗ ಸ್ಥಾನಕ್ಕೆ ಏರಬಹುದು. ಗಾಂಧೀಜಿ ಸರ್ವಧರ್ಮಗಳ ಸಾರ ಒಂದೇ ಎಂದು ತಿಳಿಸಿದರು. ಈ ಭಾವನೆ ದೇಶದ ಪ್ರತಿಯೊಬ್ಬ ಜನರಲ್ಲಿ ಇರುವುದರಿಂದಲೇ ದೇಶದಲ್ಲಿ ಹಲವಾರು ಧರ್ಮಗಳಿದ್ದರೂ ಶಾಂತಿ ನೆಲೆಸಿದೆ. ದೇಶ ಒಕ್ಕೂಟ ವ್ಯವಸ್ಥೆಯಡಿ ಒಗ್ಗಟಿನಿಂದ ಮುಂದುವರಿಯುತ್ತಿದೆ. ಮಹಾತ್ಮಾ ಗಾಂಧೀಜಿಯವರ ಸರಳ ಜೀವನ, ತತ್ವಗಳ ಬಗ್ಗೆ ಇಂದಿನ ಪೀಳಿಗೆ ಅರಿತು, ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಹೇಳಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಮಹಾತ್ಮಾ ಗಾಂಧೀಜಿ ಅವರು ಸತ್ಯಾಗ್ರಹ ಹಾಗೂ ಅಹಿಂಸೆಯ ಮೂಲಕ ನಮ್ಮ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟರು. ಗಾಂಧೀಜಿ ಅವರ ಜೀವನವೇ ಜಗತ್ತಿಗೆ ಒಂದು ಸಂದೇಶವಾಗಿದೆ. ಗಾಂಧೀಜಿ ಅವರ ತತ್ವಾದರ್ಶಗಳನ್ನು ನಿತ್ಯಜೀವನದಲ್ಲಿ ಮೈಗೂಡಿಸಿಕೊಂಡು ಪ್ರಾಮಾಣಿಕತೆ ಮತ್ತು ವೃತ್ತಿಪರತೆಯಿಂದ ಕಾರ್ಯನಿರ್ವಹಿಸಬೇಕು. ದಾರ್ಶನಿಕರು, ಮಹನೀಯರ ಆಶಯದಂತೆ ಪ್ರತಿಯೊಬ್ಬರು ಅಹಿಂಸಾ ತತ್ವ ಪಾಲಿಸುವುದರ ಜತೆಗೆ ಸತ್ಯ, ಧರ್ಮದ ಹಾದಿಯಲ್ಲಿ ನಡೆಯಬೇಕು ಎಂದರು. ಪ್ರಾಮಾಣಿಕವಾಗಿ ದೇಶವನ್ನು ಮುನ್ನೆಡೆಸಿದ ಕೀರ್ತಿ ಲಾಲ್ ಬಹದ್ದೂರ್ ಶಾಸ್ತ್ರೀ ಅವರಿಗೆ ಸಲ್ಲುತ್ತದೆ. ಮಹನೀಯರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆದು ಉತ್ತಮ ಸಮಾಜ ನಿರ್ಮಾಣ ಮಾಡೋಣ ಎಂದು ಹೇಳಿದರು. ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಮಾತನಾಡಿ, ಮಹಾತ್ಮ ಗಾಂಧೀಜಿ ಅವರು ಸರಳತೆ, ನೇರ ನಡೆ–ನುಡಿಗಳಿಂದ ಅತೀ ಎತ್ತರಕ್ಕೆ ಬೆಳೆದು, ಸತ್ಯ, ಶಾಂತಿ, ಅಹಿಂಸೆ ಎಂಬ ಮಹಾ ಅಸ್ತ್ರಗಳೊಡನೆ ಬ್ರಿಟೀಷರನ್ನು ಮಣಿಸಿ ಭಾರತಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ನಮ್ಮ ಹೆಮ್ಮೆಯ ವಿಶ್ವನಾಯಕರು. ಅವರ ಜೀವನಗಾಥೆ ನಮ್ಮೆಲ್ಲರಿಗೂ ಸ್ಫೂರ್ತಿಯಾಗಬೇಕಿದೆ ಎಂದರು.

ಗಾಂಧೀಜಿ ಅವರ ಜೀವನ ಆದರ್ಶಗಳನ್ನು ಜನರಿಗೆ ವಿಶೇಷವಾಗಿ ಯುವ ಸಮುದಾಯಕ್ಕೆ ಪರಿಚಯಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ವಿದ್ಯಾರ್ಥಿ ಯುವಜನರಲ್ಲಿ ಮಹಾತ್ಮಾ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳವಳಿ, ಸರಳೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿತ್ತು, ವಿಜೇತರಿಗೆ ನಗದು ಬಹುಮಾನ ಮತ್ತು ಪ್ರಮಾಣ ಪತ್ರ ನೀಡಿ ಗೌರವಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಚಿತ್ರದುರ್ಗ ಸಂತಜೋಸೆಫ್ ಕಾನ್ವೆಂಟ್ ಶಾಲೆಯ ವಿದ್ಯಾರ್ಥಿಗಳು ಸರ್ವಧರ್ಮ ಪ್ರಾರ್ಥನೆ ಮಾಡಿದರು. ಮೀನಾಕ್ಷಿ ಭಟ್, ಆರ್. ಎಂ.ಅಮೃತ, ತೇಜಸ್ವಿನಿ ಮತ್ತು ಸಂಗಡಿಗರು ವೈಷ್ಣವ ಜನತೋ ಹಾಗೂ ರಘುಪತಿ ರಾಘವ ರಾಜಾರಾಂ, ರಾಮ್‌ಧುನ್ ಗೀತಗಾಯನ ನಡೆಸಿಕೊಟ್ಟರು.

ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ

ಮಹಾತ್ಮಾ ಗಾಂಧೀಜಿ ಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಜಿಲ್ಲೆಯ ಪ್ರೌಢಶಾಲೆ, ಪದವಿಪೂರ್ವ ಕಾಲೇಜು ಹಾಗೂ ಪದವಿ, ಸ್ನಾತಕೋತ್ತರ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಬಿ.ಆನಂದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ ಸಿಬ್ಬಂದಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು. ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಕೂಡ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಪ್ರಮುಖ ಸುದ್ದಿ

ಆರೋಪ, ಪ್ರತ್ಯಾರೋಪಗಳೇನೂ ಹೊಸದಲ್ಲ, ಹರಿಶ್ಚಂದ್ರನ ಕಾಲದಿಂದಲೂ ಇದೆಲ್ಲಾ ಇದೆ

» ದಾವಣಗೆರೆ

ನಾಯಕ ಸಮಾಜದ ಶಕ್ತಿ ಕೇಂದ್ರವಾಗಿರುವ ರಾಜನಹಳ್ಳಿ ವಾಲ್ಮೀಕಿ ಪೀಠದ ವಾಲ್ಮೀಕಿ ಶ್ರೀ ಪ್ರಸನ್ನಾನಂದ ಪುರಿ ಸ್ವಾಮೀಜಿಗೆ ಮಕ್ಕಳಿದ್ದಾರೆ ಎಂದು ಕೆಲವರು ಆರೋಪ ಮಾಡಿದ್ದು ಸ್ವಾಮೀಜಿ ಹಾಗೂ ಆ ಮಕ್ಕಳ ಡಿಎನ್‌ಎ ಪರೀಕ್ಷೆ ಮಾಡಿಸೋಣ ಎಂಬುದಾಗಿ ವಾಲ್ಮೀಕಿ ಸಮಾಜದ ನಾಯಕ ಮತ್ತು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಸ್ಫೋಟಕ ಹೇಳಿಕೆ ನೀಡುವ ಮೂಲಕ ಎಲ್ಲಾರ ಕಣ್ಣು ಹುಬ್ಬೆರುವಂತೆ ಮಾಡಿದ್ದಾರೆ.

ಹರಿಹರ ತಾಲೂಕು ರಾಜನಹಳ್ಳಿಯ ಶ್ರೀ ವಾಲ್ಮೀಕಿ ಗುರುಪೀಠದಲ್ಲಿ ಭಾನುವಾರ ಶ್ರೀಮಠ, ಟ್ರಸ್ಟ್, ಗುರುಗಳು, ಧರ್ಮದರ್ಶಿಗಳ ವಿರುದ್ಧ ಗೊಂದಲ, ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ವಿಚಾರ, ಹೇಳಿಕೆಗಳಿಗೆ ಸ್ಪಷ್ಟೀಕರಣ ನೀಡಲು ರಾಜ್ಯ ಮಟ್ಟದ ಸಭೆಯಲ್ಲಿ ಆಯೋಜಿಸಿದ್ದರು ಈ ಸಭೆಯಲ್ಲಿ ಮಾತನಾಡಿ, ಸ್ವಾಮೀಜಿ ಹಾಗೂ ಮಕ್ಕಳ ಡಿಎ□□□ ಪರೀಕ್ಷೆ ಕಾನೂನಾತ್ಮಕವಾಗಿ ಮಾಡಿಸಬೇಕಾ ಅಥವಾ ಖಾಸಗಿಯಾಗಿ ಮಾಡಿಸಬೇಕಾ ಎಂಬ ಬಗ್ಗೆ ಚರ್ಚಿಸೋಣ ಎಂದರು.

ಇನ್ನು ಮೂರು ತಿಂಗಳಲ್ಲೇ ಸ್ವಾಮೀಜಿ ಹಾಗೂ ಹೋಗಬೇಕು. ಆ ಮಕ್ಕಳ ಡಿಎನ್‌ಎ ಟೆಸ್ಟ್ ನಡೆದು ಆಗ ಎಲ್ಲವೂ ಸ್ಪಷ್ಟವಾಗಲಿದೆ. ಶ್ರೀ ಪ್ರಸನ್ನಾನಂದ ಸ್ವಾಮೀಜಿ – ಬಹಳ ಸ್ಪಷ್ಟವಾಗಿ ನಿಮ್ಮ ಅನುಮಾನಗಳಿಗೆ ಉತ್ತರ ನೀಡಿದ್ದಾರೆ. ಸ್ವಾಮೀಜಿ ಮದುವೆಯಾಗಿದ್ದಾರೆಂಬ ಆರೋಪದ ಬಗ್ಗೆ ಸ್ವಾಮೀಜಿ ಅದನ್ನು ಅಲ್ಲಗೆಳೆದಿದ್ದಾರೆ. ಆಸ್ತಿ ಪಾಸ್ತಿ ಬಗ್ಗೆಯೂ ಸ್ಪಷ್ಟನೆ ನೀಡಿದ್ದಾರೆ ಎಂದು ತಿಳಿಸಿದರು.

ಸ್ವಾಮೀಜಿ ಆಪ್ತ ಸಹಾಯಕರ ಬಗ್ಗೆಯೂ ಚರ್ಚೆಯಾಗಿದೆ.ಇಂತಹ ಆರೋಪ, ಪ್ರತ್ಯಾರೋಪ ಗಳೇನೂ ಹೊಸದಲ್ಲ, ಸತ್ಯ ಹರಿಶ್ಚಂದ್ರನ ಕಾಲದಿಂದಲೂ ಇದೆಲ್ಲಾ ಇದೆ. ಒಳ್ಳೆಯದು ಮಾಡುವುದಕ್ಕೆ ಮುಂದಾದಾಗ ಇಂತಹ ಆರೋಪಗಳೆಲ್ಲವೂ ಸಮುದಾಯವನ್ನು ಪ್ರಗತಿಯತ್ತ ಕೊಂಡೊಯ್ಯ ಬೇಕಷ್ಟೆ ಎ0ದು ತಿಳಿಸಿದರು.

20 ಕಡೆ ಕೇಸ್ ಹಾಕಿ, ಓಡಾಡಲಿ ಎಲ್ಲೆಡೆ: ಆರೋಪ ಮಾಡಿದವರು ಎಲ್ಲಾ ಕೇಸ್ ದಾಖಲಿಸಿದಂತೆ ಸ್ವಾಮೀಜಿ ಪ್ರತಿ ದೂರು ನೀಡಲು ಕಾನೂನಿನಲ್ಲಿ ಅವಕಾಶ ಇದೆ, ಅಂತವರ ಮೇಲೆ 20 ಕಡೆ ಕೇಸ್ ಹಾಕಿ, ಓಡಾಡಲಿ ಎಲ್ಲಾಕಡೆ, ಸ್ವಾಮೀಜಿ ಕಾರು ಡ್ರೈವರ್ ಜಾತಿ ಬಗ್ಗೆ ಪ್ರಶ್ನೆ ಎದ್ದಿದೆ. ಆದು ಅವರ ವೈಯಕ್ತಿಕ ವಿಚಾರ, ಸ್ವಾಮಿಗಳಾದವರ ಮೇಲೆ ಇಂತಹ ಆರೋಪ ಬ0ದಿರುವುದು ಇದೇ ಮೊದಲು, ನಾಲ್ಕು ದಶಕಗಳ ಇತಿಹಾಸದಲ್ಲೇ ಇಂತಹ ಆರೋಪ ಮೊದಲ ಸಲ ಕೇಳಿ ಬಂದಿದೆ ಎಂದು ಸತೀಶ ಜಾರಕಿಹೊಳಿ ತಿಳಿಸಿದರು.

ಪುಟ 2

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5500
85 ಕೆಡಿಎಂ (ಗ್ರಾಂ)	5100

ಬೆಳ್ಳಿ ಬೆಲೆ	
ಕೆಜಿ	63500

ಬ್ರಿಟೀಷರಿಂದ ಭಾರತೀಯರಿಗೆ ಮುಕ್ತಿ ಕೊಡಿಸಿದ ಕೀರ್ತಿ ಗಾಂಧೀಜಿಯವರದ್ದು: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಚಿಂತನೆಗಳು ಮತ್ತು ಆದರ್ಶಗಳು ರಾಷ್ಟ್ರವನ್ನು ಅಭಿವೃದ್ಧಿಪಥದತ್ತ ಕೊಂಡೊಯಲು ಸಾಧ್ಯವಾಯಿತು. ವಿಶ್ವದಲ್ಲಿ ಪ್ರಬಲವಾದ ಪ್ರಜಾಸತಾತ್ಮಕ ರಾಷ್ಟ್ರವಾದ ಭಾರತದಲ್ಲಿ ಗಾಂಧೀಜಿಯವರ ಹೋರಾಟಗಳು ಸರ್ವಕಾಲಕ್ಕೂ ಚಿರಸ್ತಾಯಿಯಾಗಿ ಉಳಿಯಲಿವೆ ಎಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಕಚೇರಿ ಆವರಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಹಯೋಗದಲ್ಲಿ 154ನೇ ಮಹಾತ್ಮಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಹುಟ್ಟುಹಬ್ಬ ಆಚರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಹಲವಾರು ವರ್ಷಗಳ ಬ್ರಿಟೀಷ್‌ಶಾಹಿ ಆಡಳಿತ ನಮ್ಮನ್ನು ನಿರಂತರ ಶೋಷಣೆಗೆ ಗುರಿಮಾಡುತ್ತಿದ್ದು, ಬ್ರಿಟೀಷರ ಆಡಳಿತದಿಂದ ಭಾರತೀಯರು ಪ್ರತಿಹಂತದಲ್ಲೂ ತಲೆತಗ್ಗಿಸುವಂತಾಗಿತ್ತು. ಬ್ರಿಟೀಷರನ್ನು ಕಂಡರೆ ಎಲ್ಲರೂ ಭಯಪಡುವಂತಹ ವಾತಾವರಣ ನಿರ್ಮಾಣವಾಗಿತ್ತು, ಇಂತಹ ಸಂದರ್ಭದಲ್ಲಿ ಕೇವಲ ಅಹಿಂಸಾ ಮಾರ್ಗದ ಮೂಲಕ ಬ್ರಿಟೀಷರ ಮನಪರಿವರ್ತಿಸಿ ನಮಗೆ ಸ್ವಾತಂತ್ರ್ಯವನ್ನು ತಂದುಕೊಟ್ಟ ಮಹಾನ್ ಪುರುಷ ಮಹಾತ್ಮಗಾಂಧೀಜಿ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ರಾಜ್ಯ ಸರ್ಕಾರ ಆಚರಿಸುವ ಹಲವಾರು ಮೌಲ್ಯಯುತ ಕಾರ್ಯಕ್ರಮಗಳಲ್ಲಿ ಗಾಂಧಿ ಜಯಂತಿ ಕಾರ್ಯಕ್ರಮ ಎಲ್ಲರನ್ನೂ ವಿಶೇಷವಾಗಿ ಆಕರ್ಷಿಸುತ್ತದೆ. ಗಾಂಧೀಜಿಯವರು ನಡೆದುಕೊಂಡ ರೀತಿ, ನೀತಿ ಅವರು ಸಮಾಜದ ಉದ್ಧಾರಕ್ಕಾಗಿ ಹಾಕಿಕೊಟ್ಟ ಸನ್ಮಾರ್ಗ ನಮಗೆ ಎಂದಿಗೂ ಸ್ಫೂರ್ತಿ ಎಂದರು.

ಡಿವೈಎಸ್ಪಿ ರಾಜಣ್ಣ, ಪಶುವೈದ್ಯಾಧಿಕಾರಿ ರೇವಣ್ಣ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಕೃಷಿ ಅಧಿಕಾರಿ ಅಶೋಕ್ ಬಿಇಒ ಸುರೇಶ್, ಬಿಸಿಎಂ ಅಧಿಕಾರಿ ದಿವಾಕರ್, ಸಮಾಜ ಕಲ್ಯಾಣಾಧಿಕಾರಿ ಮಂಜುನಾಥ, ಪೌರಾಯುಕ್ತ ಸಿ.ಚಂದ್ರಪ್ಪ, ನಿವೃತ್ತ ಪ್ರಾಧ್ಯಾಪಕ ನಾಗರಾಜು, ನಗರಸಭಾ ಸದಸ್ಯೆ ಸುಜಾತಪಾಲಯ್ಯ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಹೊಸದುರ್ಗ ಪುರಸಭೆಯಿಂದ ಸ್ವಚ್ಛತಾ ಜಾಥಾ ಕೈಗೊಂಡು ಪ್ರತಿಜ್ಞಾ ವಿಧಿ ಭೋದಿಸಿ ಶ್ರಮದಾನ

» ಹೊಸದುರ್ಗ

ಮಹಾತ್ಮಾ ಗಾಂಧಿ ಜಯಂತಿ ಪ್ರಯುಕ್ತ ಪಟ್ಟಣದ ಪುರಸಭೆಯಲ್ಲಿ ಸೋಮವಾರ ಗಾಂಧಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಸ್ವಚ್ಛತಾ ಜಾಥಾ ಕೈಗೊಂಡು ಪ್ರತಿಜ್ಞಾ ವಿಧಿ ಭೋದಿಸಿ ಶ್ರಮದಾನ ಕಾರ್ಯಕ್ರಮ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ ತಿಮ್ಮರಾಜು ಬಿ.ಇ.ಓ ಸಯ್ಯದ್ ಮೋಸಿನ್, ಬಿ.ಆರ್.ಸಿ ಶ್ರೀನಿವಾಸ್,ಪುರಸಭಾ ಸದಸ್ಯರುಗಳಾದ ಶ್ರೀನಿವಾಸ್, ದೊಡ್ಡಯ್ಯ, ಸರೋಜಮ್ಮ, ರಾಜೇಶ್ವರಿಆನಂದ್, ಜಾಫರ್ ಸಾದಿಕ್, ನಾಗರಾಜ್, ಶಂಕ್ರಪ್ಪ, ದಾಳಿಂಬೆ ಗಿರೀಶ್ ಮತ್ತು ರಾಮಚಂದ್ರಪ್ಪ ಹಾಜರಿದ್ದರು. ಸ್ವಚ್ಛ ಭಾರತ್ ಮಿಷನ್ ಮುಂದುವರೆದ ಭಾಗವಾಗಿ ಸ್ವಚ್ಛ ಹೀ ಸೇವಾ ಕಾರ್ಯಕ್ರಮ ಹಿನ್ನಲೆ ಪುರಸಭೆ,ಸಾರ್ವಜನಿಕ ಶಿಕ್ಷಣ ಇಲಾಖೆ, ಎನ್.ಸಿ.ಸಿ ಎನ್.ಎಸ್.ಎಸ್ ಎಸ್.ಹೆಚ್.ಜಿ ಹಾಗೂ ಸಾರ್ವಜನಿಕರ ಸಂಯೋಗದೊಂದಿಗೆ

ಗಾಂಧಿ ಸರ್ಕಲ್ ನಿಂದ ಟಿ.ಬಿ ಸರ್ಕಲ್ ವರೆಗೆ ಸ್ವಚ್ಛತಾ ಜಾಥಾ ಕೈಗೊಂಡು ಶ್ರಮದಾನ ಕಾರ್ಯಕ್ರಮವನ್ನು ಬಿಇಓ ಕಛೇರಿ ಮುಂಭಾಗ ಪ್ರಾರಂಭಿಸಲಾಯಿತು. ಸ್ವಚ್ಛತಾ ಪ್ರತಿಜ್ಞೆ ಬೋದಿಸಿದ ಮುಖ್ಯಾಧಿಕಾರಿ ತಿಮ್ಮರಾಜು ಜಿ ವಿ ಆರೋಗ್ಯವೇ ಭಾಗ್ಯ ಎಂದು ಕರೆ ನೀಡಿದರು.

ತಾಯ್ನಾಡಿನಿಂದ ಆಗಮಿಸಿದ ಕರ್ನಾಟಕದ ಖ್ಯಾತ ಭರತನಾಟ್ಯ ಕಲಾವಿದೆ ವಿದೂಷಿ ಡಾ. ಸಹನಾ ಭಟ್

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ:ಭಾರತೀಯ ಸಾಂಸ್ಕೃತಿಕ ಕೇಂದ್ರ ಕತಾರ್ ಆಶ್ರಯದಲ್ಲಿ ದೋಹಾ ನಗರದ ಭಾರತೀಯ ಸಾಂಸ್ಕೃತಿಕ ಕೇಂದ್ರದ "ಅಶೋಕ ಸಭಾಂಗಣ ದಲ್ಲಿ" ತಾಯ್ನಾಡಿನಿಂದ ಆಗಮಿಸಿದ ಕರ್ನಾಟಕದ ಖ್ಯಾತ ಭರತನಾಟ್ಯ ಕಲಾವಿದೆ ವಿದೂಷಿ ಡಾ. ಸಹನಾ ಭಟ್ ಅವರು ನೆರೆದ ಪ್ರೇಕ್ಷಕರನ್ನು ತಮ್ಮ ಅದ್ಭುತ ನೃತ್ಯಗಳ ಮೂಲಕ ಮನಸೂರೆಗೊಂಡರು.

ಕಾರ್ಯಕ್ರಮದಲ್ಲಿ ಭಾರತೀಯ ರಾಯಭಾರಿ ಕಚೇರಿಯ ಡೆಪ್ಯೂಟಿ ಚೀಫ್ ಮಿಷನ್ (ಡಿಸಿಎಂ) ಸಂದೀಪ್ ಕುಮಾರ ಅವರು ಮುಖ್ಯ ಅಥಿತಿ ಗಳಾಗಿ ಭಾಗವಸಿದ್ದರು ಭಾರತೀಯ ಸಾಂಸ್ಕೃತಿಕ ಕೇಂದ್ರ ದ ಅಧ್ಯಕ್ಷರಾದ ಮಣಿಕಂಠ ಅವರು ಮತ್ತು ಉಪಾಧ್ಯಕ್ಷರಾದ ನಮ್ಮ ಹೆಮ್ಮೆಯ ಕನ್ನಡಿಗ ಸುಬ್ರಮಣ್ಯ ಹೆಬ್ಬಾಗಿಲು ಹಾಗೂ ಸಮಿತಿಯ ಸರ್ವಸದಸ್ಯರು

ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಈ ಸುಂದರ ಕಾರ್ಯಕ್ರಮವನ್ನು ಸಾಂಸ್ಕೃತಿಕ ಕಾರ್ಯಧರ್ಶಿಗಳಾದ ಶ್ರೀಮತಿ ಸುಮಾ ಮಹೇಶ್ ಗೌಡ ಅವರು ನಿರೂಪಿಸಿದರು. ಈ ಕಾರ್ಯಕ್ರಮ ಪ್ರತಿವಾರವೂ ಪ್ರಸಿದ್ಧ ಕಲಾವಿದರ ಕಲೆಯನ್ನು ಕತಾರ್‌ದಲ್ಲಿ ನೆಲೆಸಿರುವ ಭಾರತೀಯ ಕಲಾಭಿಮಾನಿಗಳಿಗೆ ಉಣಬಡಿಸುವ ಈ ಕಾರ್ಯ ಶ್ಲಾಘನೀಯ. ಕಾರ್ಯಕ್ರಮದಲ್ಲಿ ವಿದುಷಿ ಡಾ. ಸಹನಾ ಭಟ್ ಅವರನ್ನು ಸಮಸ್ತ ಅನಿವಾಸಿ ಭಾರತೀಯರ ಪರವಾಗಿ ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿದ ಡಾ. ಸಹನಾ ಭಟ್ ಅವರು ನೆರಿದಿದ್ದ ಎಲ್ಲ ರಾಜ್ಯಗಳಲ್ಲಿ ಕಲಾಭಿಮಾನಿಗಳ ಸಮ್ಮುಖದಲ್ಲಿ ತಾವು ಪ್ರದರ್ಶನ ನೀಡಿದ್ದು ತಮ್ಮ ಕಲಾಜೀವನದ ಅತ್ಯುತ್ತಮ ಕ್ಷಣವಾಗಿದೆ ಎಂದು ಸಂತೋಷ ವ್ಯಕ್ತಪಡಿಸಿದರು ಮತ್ತು ಇದಕ್ಕೆ ಕಾರಣಿಭೂತರಾದ ಸುಬ್ರಮಣ್ಯ ಹೆಬ್ಬಾಗಿಲು ಇವರಿಗೆ ಧನ್ಯವಾದ ಸಮರ್ಪಿಸಿದರು.

ಹೊಳಲ್ಕೆರೆಯಲ್ಲಿ ಗಜಾನನ ಸಮಿತಿಯ ಗಣಪತಿ ವಿಸರ್ಜನೆ ಮರವಣಿಗೆ

» ಹೊಳಲ್ಕೆರೆ

ಪಟ್ಟಣದ ಶ್ರೀ ಗಜಾನನ ಸಂಘದ ವತಿಯಿಂದ ಹಮ್ಮಿಕೊಂಡಿದ್ದ 66ನೇ ವರ್ಷದ ಶ್ರೀ ಗಜಾನನ ಪೂಜಾ ಮಹೋತ್ಸವ ಹಾಗೂ ಗಜಾನನ ಮೂರ್ತಿ ವಿಸರ್ಜನಾ ಮೇರವಣಿಗೆ ಪಟ್ಟಣದ ರಾಜ ಬೀದಿಗಳಲ್ಲಿ ವಿವಿಧ ವಾದ್ಯ ವೃಂದಗಳ ಸಹಯೋಗದಲ್ಲಿ ಅದ್ದೂರಿಯಾಗಿ ಆಯೋಜನೆ ಮಾಡಲಾಗಿದೆ.ವಿಸರ್ಜನಾ ಕಾರ್ಯಕ್ರಮಕ್ಕೆ ಪಟ್ಟಣದ ಸವಿಧಾನ ಸೌಧದಲ್ಲಿ ಚಾಲನೆ ನೀಡಲಾಗಿತ್ತು. ಪಟ್ಟಣದ ಗಣಪತಿ ಸರ್ಕಲ್, ದಾವಣಗೆರೆ ರಸ್ತೆ, ಸಿದ್ದರಾಮಯ್ಯ ಬಡಾವಣೆ, ಚಿತ್ರದುರ್ಗ ರಸ್ತೆ, ಪಟ್ಟಣದ ಮತ್ತಿತರ ರಾಜಬೀದಿಗಳಲ್ಲಿ ಸಂಚರಿಸಿ ಭಕ್ತರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಯಿತು. ಗಣಪತಿ ವಿಸರ್ಜನಾ ಮೆರವಣಿಗೆಯಲ್ಲಿ ನಾಡಿನ ಹೆಸರಾಂತ ಜಾನಪದ ಕಲಾ ತಂಡಗಳಾದ ಡೊಳ್ಳು, ವೀರಗಾಸೆ ,ಭಜನೆ ,ಮತ್ತು ಹಲವಾರು ತಂಡಗಳ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದು, ಅದ್ದೂರಿ ಮೆರವಣಿಗೆಯನ್ನು ಕೈಗೊಳ್ಳಲಾಗಿತ್ತು. ಮೆರವಣಿಗೆ ನೇತೃತ್ವವನ್ನು ಹೊಳಲ್ಕೆರೆಯ ಪುರಸಭೆಯ ಎಲ್ಲಾ ಸದಸ್ಯರು, ಗಣಪತಿ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು, ವಿವಿಧ ಘಟಕಗಳ ಪದಾಧಿಕಾರಿಗಳು, ಹಾಗೂ ಹಲವಾರು ಸಂಘ ಸಂಸ್ಥೆಯ ಪ್ರತಿನಿಧಿಗಳು, ಸಾರ್ವಜನಿಕರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಹೊಸದುರ್ಗ ಪಟ್ಟಣದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದಸೋಮವಾರಗಾಂಧಿಜಯಂತಿಯನ್ನಆಚರಿಸಲಾಯಿತು.ಈ ಸಂಧರ್ಬದಲ್ಲಿ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ,ತಾಲೂಕು ಕ.ಸಾ.ಪ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಸಮಾಜ ಸೇವಕ ಅಗ್ರೋ ಹೆಚ್.ಶಿವಣ್ಣ, ಡಿ.ಟಿ.ಚಂದ್ರಶೇಖರ್ ಇದ್ದರು.

ಫಾಸ್ಟ್ ನ್ಯೂಸ್

ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸಸಿ ನೆಟ್ಟ ಜಯಕರ್ನಾಟಕ ವೇದಿಕೆ

ಚಿತ್ರದುರ್ಗ: ಜಯಕರ್ನಾಟಕ ಜನಪರ ವೇದಿಕೆ ಮೂರನೆ ವಾರ್ಷಿಕೋತ್ಸವ ಹಾಗೂ ಗಾಂಧಿ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಉದ್ಯಾನವನದಲ್ಲಿ ಸೋಮವಾರ ಗಿಡಗಳನ್ನು ನೆಡಲಾಯಿತು. ಜಯಕರ್ನಾಟಕ ಜನಪರ ವೇದಿಕೆ ಜಿಲ್ಲಾಧ್ಯಕ್ಷ ಬಿ.ಟಿ.ರಾಜೇಂದ್ರ ಸಸಿಗಳನ್ನು ನೆಟ್ಟು ಮಾತನಾಡುತ್ತ ಮನೆಗೊಂದು ಮರ, ಊರಿಗೊಂದು ಕೆರೆ, ಜಯಕರ್ನಾಟಕ ಜನಪರ ವೇದಿಕೆ ನಡೆ ನಿಸರ್ಗದ ಕಡೆ ಎನ್ನುವ ಅಭಿಯಾನ ಹಮ್ಮಿಕೊಂಡಿದ್ದು, ಜಿಲ್ಲಾಧಿಕಾರಿ ಕಚೇರಿ, ರಕ್ಷಣಾಧಿಕಾರಿ ಕಚೇರಿ ಆವರಣ, ಕೋಟೆ ಠಾಣೆ ಇನ್ಸ್‌ಪೆಕ್ಟರ್ ಕಚೇರಿ ಆವರಣ ಸೇರಿದಂತೆ ನಗರದಲ್ಲಿ ನಾನಾ ಕಡೆ ಗಿಡಗಳನ್ನು ನೆಡಲಾಗಿದೆ. ಮುಂದಿನ ಪೀಳಿಗೆಗೆ ಹಸಿರು ಪ್ರಕೃತಿಯನ್ನು ಕೊಡುಗೆಯಾಗಿ ನೀಡಬೇಕಾಗಿರುವುದರಿಂದ ಪ್ರತಿಯೊಬ್ಬರು ತಮ್ಮ ಮನೆಗಳ ಎದುರು ಒಂದೊಂದು ಗಿಡ ನೆಟ್ಟು ಪೋಷಿಸಿ ದೊಡ್ಡ ಮರವನ್ನಾಗಿ ಬೆಳೆಸುವಂತೆ ಮನವಿ ಮಾಡಿದರು.ಕುಮಾರಸ್ವಾಮಿ, ಅಭಿಲಾಷ್, ಅಶೋಕ್, ಗಿರೀಶ್, ನಿರಂಜನ್, ನಾಗರಾಜ್, ದಾದು, ವಿನೋದ್‌ರಾಜ್, ಕಾರ್ತಿಕ್, ರಂಗಸ್ವಾಮಿ, ರಜಿನಿ, ಅಣ್ಣಪ್ಪ, ಮಧು, ಯತಿರಾಜ್, ರಾಕೇಶ್ ಗಿಡ ನೆಡುವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಜಿಲ್ಲಾ ಕಟ್ಟಡ ಕಾರ್ಮಿಕರ ಕಚೇರಿಯಲ್ಲಿ ರಾಷ್ಟ್ರಪಿತ ಮಹಾತ್ಮಗಾಂಧಿಯ ಜಯಂತಿ ಆಚರಣೆ

ಚಿತ್ರದುರ್ಗ : ನಗರದ ಪ್ರಸನ್ನ ಟಾಕೀಸ್ ರಸ್ತೆಯಲ್ಲಿರುವ ಜಿಲ್ಲಾ ಕಟ್ಟಡ ಕಾರ್ಮಿಕರ ಫೆಡರೇಷನ್ ಕಚೇರಿಯಲ್ಲಿ ಸೋಮವಾರ ಗಾಂಧಿ ಜಯಂತಿಆಚರಿಸಲಾಯಿತು.ಫೆಡರೇಷನ್ ಜಿಲ್ಲಾಧ್ಯಕ್ಷ ಸಿ.ಕೆ.ಗೌಸ್‌ಪೀರ್ ಮಹಾತ್ಮಗಾಂಧಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡುತ್ತ ದೇಶದಲ್ಲಿ ಮದ್ಯಪಾನ ಸಂಪೂರ್ಣವಾಗಿ ನಿಷೇಧಿಸಬೇಕೆಂಬ ಕನಸು ಕಂಡಿದ್ದ ಗಾಂಧಿ ಬ್ರಿಟೀಷರ ವಿರುದ್ಧ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ್ದಾರೆ. ರಾಮರಾಜ್ಯವಾಗಬೇಕೆಂಬ ಅವರ ಕನಸು ನನಸಾಗಿಯೇ ಉಳಿದಿದೆ. ಅಲ್ಲಲ್ಲಿ ಮಹಿಳೆ, ಅಪ್ರಾಪ್ತ ಬಾಲಕಿಯರ ಮೇಲೆ ಅತ್ಯಾಚಾರವಾಗುತ್ತಿರುವುದು ನಿಲ್ಲಬೇಕು ಎಂದು ಹೇಳಿದರು.ಲಾಲ್‌ಬಹದ್ದೂರ್‌ಶಾಸ್ತ್ರಿ ಭಾರತದ ಪ್ರಧಾನಿಯಾಗಿದ್ದರೂ ಎಂದಿಗೂ ಐಷಾರಾಮಿ ಜೀವನ ನಡೆಸಿದವರಲ್ಲ. ಸರಳತೆ ಅವರ ಮಂತ್ರವಾಗಿತ್ತು. ಹಾಗಾಗಿ ಗಾಂಧಿ ಮತ್ತು ಶಾಸ್ತ್ರಿರವರ ಆದರ್ಶ ತತ್ವಗಳನ್ನು ಎಲ್ಲರೂ ಪಾಲಿಸಿದಾಗ ಮಾತ್ರ ಇಬ್ಬರು ಮಹನೀಯರ ಜಯಂತಿಗೆ ನಿಜವಾದ ಅರ್ಥ ಸಿಗುತ್ತದೆ ಎಂದರು.ಮಹಮದ್ ಜಿಕ್ರಿಯಾವುಲ್ಲಾ, ರಂಗಸ್ವಾಮಿ, ಸೈಯದ್ ಮುಜ್ಜು ಗಾಂಧಿಜಯಂತಿಯಲ್ಲಿ ಪಾಲ್ಗೊಂಡಿದ್ದರು.

ಐತಿಹಾಸಿಕ ಕೋಟೆ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ

ಚಿತ್ರದುರ್ಗ: ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಅಂಗವಾಗಿ ಜಿಲ್ಲಾಡಳಿತ ಹಾಗೂ ನಗರಸಭೆ ಸಹಯೋಗದಲ್ಲಿ ಭಾನುವಾರ ನಗರದ ಐತಿಹಾಸಿಕ ಕೋಟೆ ಆವರಣದಲ್ಲಿ ಸ್ವಚ್ಛತಾ ಕಾರ್ಯ ನಡೆಯಿತು. ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಅವರು ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ, ಸ್ವಚ್ಛತಾ ಪ್ರತಿಜ್ಞೆ ಬೋಧಿಸಿದರು. ನಗರಸಭೆ ಪೌರಾಯುಕ್ತೆ ರೇಣುಕಾ, ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ನಾಗರಾಜ ಸೇರಿದಂತೆ ನಗರದ ಸ್ತ್ರೀ ಶಕ್ತಿ ಸಂಘದ ಸದಸ್ಯರು, ನಗರಸಭೆ ಆರೋಗ್ಯ ನೀರೀಕ್ಷಕರು, ಪೌರಕಾರ್ಮಿಕರು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳು ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಪ್ರಮುಖ ಸುದ್ದಿ

ಆರೋಪ, ಪ್ರತ್ಯಾರೋಪಗಳೇನೂ ಹೊಸದಲ್ಲ: ಸತೀಶ್

» ಮೊದಲ ಪುಟದಿಂದ

ಶ್ರೀ ವಾಲ್ಮೀಕಿ ಪೀಠಕ್ಕೆ ಬಂದ ನಂತರ ಸ್ವಾಮೀಜಿ ಸಾಕಷ್ಟು ಒಳ್ಳೆಯ ಕೆಲಸ ಮಾಡಿದ್ದಾರೆ. ಯಾವುದೇ ವ್ಯಕ್ತಿಗೂ ಕೆಲಸ ಮಾಡಲು ಇತಿಮಿತಿ ಇದೆ. ಸಾಮಾಜಿಕ ಜಾಲತಾಣದಿಂದ ಸ್ವಾಮೀಜಿಗೆ ಏನೂ ಆಗುವುದಿಲ್ಲ. ನಮ್ಮದು ಇತಿಮಿತಿಯೊಳಗೆ ಇರಬೇಕು. ನಮ್ಮ ಸಮುದಾಯವು ಬೇರೆ ಸಮುದಾಯದವರ ನೋಡಿ ಕಲಿಯಬೇಕು. ಕೆಲವರು ಬೈಯ್ಯುವುದೇ ಕೆಲಸ ಮಾಡಿಕೊಂಡಿರುತ್ತಾರೆ. ಅಂತಹವರ ಬಗ್ಗೆ ತಲೆ ಕೆಡಿಸಿಕೊಳ್ಳುವಂತಿಲ್ಲ ಎಂದು ಸತೀಶ ಜಾರಕಿಹೊಳಿ ಕುಟುಕಿದರು.

ಈ ಸಭೆಯಲ್ಲಿ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಶಾಂತಲಾ ರಾಜಣ್ಣ, ಡಾ.ಜಿ.ರಂಗಯ್ಯ, ಟಿ.ಓಬಳಪ್ಪ, ಡಾ.ಕೆ. ಆರ್.ಪಾಟೀಲ, ಮಲ್ಲಪ್ಪ, ಕೌಲಗಿ, ಹರ್ತಿಕೋಟೆ ವೀರೇಂದ್ರ ಸಿಂಹ ವೆಂಕಟರಮಣ, ಮಾಲೇನಹಳ್ಳಿ ಮಹೇಶ, ಬಿ, ಚಳುವಳಿ ರಾಜಣ್ಣ, ವೇಣುಗೋಪಾಲ, ರಾಜಾ ವೆಂಕಟಪ್ಪ ನಾಯಕ, ಬಿ.ಕಾಂತರಾಜ,,ಭೀಮರಾಯಹದ್ದಿನಾಳ, ರಘುವೀರ ನಾಯಕ, ನಂದಕುಮಾರ ಮಾಲಿ ಪಾಟೀಲ, ನಾಗರಾಜಪ್ಪ, ಪನವರ, ರಮೇಶ ಹೊದಿಗೆರೆ, ಪಾಲಯ್ಯ, ರಾಜಶೇಖರ ತಳವಾರ ಲಿಂಗವ್ವನಾಗತಿಹಳ್ಳಿ ತಿಪ್ಪೇಸ್ವಾಮಿ, ಇತರರಿದ್ದರು.

ಏನೇ ಅನುಮಾನಗಳಿರಲಿ ಸಮಾಜ ಬಾಂಧವರು ನೇರವಾಗಿ ನನ್ನ ಕೇಳಿ: ವಾಲ್ಮೀಕಿ ಶ್ರೀ

ದಾವಣಗೆರೆ: ನನ್ನ ಮೇಲೆ ಏನೇ ಅನುಮಾನಗಳಿರಲಿ, ಸಮಾಜ ಬಾಂಧವರು ನೇರವಾಗಿ ನನ್ನೇ ಕೇಳಿ, ಅದು ಬಿಟ್ಟು ಮಾಧ್ಯಮಗಳ ಮುಂದೆ ಹೋಗುವುದು ಸರಿಯೇ? ನಾನು ಮುಕ್ತವಾಗಿದ್ದೇನೆ. ನೀವು ಏನೇ ತೀರ್ಮಾನ ಕೈಗೊಂಡರೂ ಅದಕ್ಕೆ ಬದ್ಧ ಎಂದು ರಾಜನಹಳ್ಳಿ ಶ್ರೀ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಪುರಿ ಸ್ವಾಮೀಜಿ ಹೇಳಿದ್ದಾರೆ.

ಹರಿಹರ ತಾ, ರಾಜನಹಳ ಶ್ರೀ ವಾಲ್ಮೀಕಿ ಗುರುಪೀಠದಲ್ಲಿ ಭಾನುವಾರ ಗೊಂದಲ, ವಿಚಾರ, ಹೇಳಿಕೆಗಳಿಗೆ ಸ್ಪಷ್ಟಿಕರಣ ನೀಡಿ ಸಮಾಜದ ರಾಜ್ಯ ಮಟ್ಟದ ಸಭೆಯಲ್ಲಿ ಮಾತನಾಡಿ, ಸ್ವಾಮೀಜಿಗಳು ತಮ್ಮ ಹೆಸರಿಗೆ ಅಸ್ತಿಮಾಡಿಕೊಂಡಿದ್ದಾರೆಂಬ ಆರೋಪ ಕೇಳಿ ಬಂದಿವೆ ಎಂದು ಬೇಸರ ಹೊರ ಹಾಕಿದರು. ನಮ್ಮ ಪೂರ್ವಾಶ್ರಮದ ಹೆಸರಿನಲ್ಲಿ ಯಾವುದೇ ಆಸ್ತಿಗಳೂ ಇಲ್ಲ ಎಂದ ಶ್ರೀ ಪ್ರಸನ್ನಾನಂದ ಪುರಿ ಸ್ವಾಮೀಜಿ, ಶ್ರೀ ವಾಲ್ಮೀಕಿ ಗುರುಪೀಠ, ರಾಜನಹಳ್ಳಿ ಹೆಸರಿನಲ್ಲಿ ಇದೆ ಎಂದು ತಿಳಿಸಿದರು. ಎಲ್ಲವೂ ಮಠದ ಆಸ್ತಿ: ಹಿಂದೆ ಲಿಂಗೈಕ್ಯ ಶ್ರೀ ಪ

ಕಾಂಗ್ರೆಸ್ ಕಚೇರಿಯಲ್ಲಿ ಗಾಂಧಿ, ಶಾಸ್ತ್ರಿ ಜಯಂತಿ

» ಚಿತ್ರದುರ್ಗ

ದೇಶಕ್ಕೆ ಸ್ವಾತಂತ್ರ್ಯ ಸುಮ್ಮನೆ ಬಂದಿಲ್ಲ. ಸಾವಿರಾರು ಮಂದಿ ಪ್ರಾಣ ಬಿಟ್ಟಿದ್ದಾರೆ. ಲಕ್ಷಾಂತರ ಜನ ಎಲ್ಲವನ್ನು ಕಳೆದುಕೊಂಡು ಜೈಲಿಗೆ ಹೋಗಿದ್ದಾರೆ. ರಾಜ್ಯಾಂಗ, ಭಾರತ, ಸ್ವಾತಂತ್ರ್ಯನಮ್ಮದುಎಂದುಕಾರ್ಯಕರ್ತರು ಎದೆತಟ್ಟಿಕೋಮುವಾದಿಗಳಿಗೆ ಹೇಳಬೇಕಿದೆ ಎಂದು ರಾಜ್ಯಸಭೆ ಮಾಜಿ ಸದಸ್ಯ ಹೆಚ್. ಹನಮಂತಪ್ಪ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ರಾಷ್ಟ್ರಪಿತ ಮಹಾತ್ಮಗಾಂಧಿ ಹಾಗೂ ಮಾಜಿ ಪ್ರಧಾನಿ ಲಾಲ್‌ಬಹದ್ದೂರ್‌ಶಾಸ್ತ್ರಿ ಇವರುಗಳ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದರು.

ಲಾಲ್‌ಬಹದ್ದೂರ್‌ಶಾಸ್ತ್ರಿ ಬಡತನದಿಂದ ಬಂದವರು, ರೈಲ್ವೆ ಮಂತ್ರಿಯಾಗಿದ್ದ ಅವರು ಕೇರಳದಲ್ಲಿ ರೈಲು ಅಪಘಾತವಾದಾಗ ನೈತಿಕ ಹೊಣೆಹೊತ್ತು ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿದರು. ದೇಶದಲ್ಲಿ ಅಂದು ಆಹಾರಕ್ಕೆ ಅಭಾವವಿದ್ದಾಗ ವಾರದಲ್ಲಿ ಒಂದು ಹೊತ್ತು ಉಪವಾಸವಿರುವಂತೆ ಜನತೆಗೆ ಕರೆ ಕೊಟ್ಟಿದ್ದರು. ಪ್ರಧಾನಮಂತ್ರಿಯಾಗಿದ್ದರೂ ಸರ್ಕಾರಿ ಕಾರು ಹತ್ತಲಿಲ್ಲ. ಮಕ್ಕಳು ಜಟಕಾದಲ್ಲಿ ತಿರುಗಾಡುತ್ತಿದ್ದರು. ಗಾಂಧಿ ಮತ್ತು ಲಾಲ್‌ಬಹದ್ದೂರ್‌ಶಾಸ್ತ್ರಿ ಇವರುಗಳು ಬ್ರಿಟೀಷರ ವಿರುದ್ಧ ದೇಶದ ಸ್ವಾತಂತ್ರ್ಯಕ್ಕಾಗಿ ನೇತೃತ್ವ ವಹಿಸಿಕೊಂಡಿದ್ದರು ಎಂದು ಸ್ಮರಿಸಿದರು.ದೇಶದ ಪ್ರಧಾನಿ ಮೋದಿ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಇನ್ನು ಹುಟ್ಟಿರಲಿಲ್ಲ. ಸ್ವಾತಂತ್ರ್ಯಕ್ಕಾಗಿ ಎಲ್ಲಾ ಜಾತಿ, ಧರ್ಮದವರು ಸೇರಿ ಹೋರಾಡಿದ್ದರ ಫಲವಾಗಿ ಭಾರತವಾಗಿದೆ. ಯಾವುದೇ ಒಂದು ಜಾತಿಗೆ ಭಾರತ ಸೇರಿದ್ದಲ್ಲ. ಎಲ್ಲರಿಗೂ ಸಮಾನತೆ, ಸ್ವಾತಂತ್ರ್ಯ ನೀಡಿರುವ ರಾಜ್ಯಾಂಗ ಈಗ ತೊಂದರೆಯಲ್ಲಿದೆ. ದೇಶಕ್ಕೆ ಸಂವಿಧಾನವನ್ನು ಕೊಡುಗೆಯಾಗಿ ನೀಡಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರಪಂಚದಲ್ಲಿಯೇ ಬುದ್ಧಿವಂತ ಮನುಷ್ಯ ಎಂದು ವಿಶ್ವಸಂಸ್ಥೆ ನಿರ್ಧರಿಸಿದೆ. ಬಿಜೆಪಿ.ಯ ಮೋದಿ ಕಣ್ಣಿಗೆ ರಾಜ್ಯಾಂಗ ಸರಿ ಕಾಣುತ್ತಿಲ್ಲ. ಅದಕ್ಕಾಗಿ ಸಂವಿಧಾನವನ್ನು ಬದಲಾವಣೆ ಮಾಡಲು ಹೊರಟಿರುವುದರ ವಿರುದ್ಧ ಕಾಂಗ್ರೆಸ್‌ನವರು ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು.

ದೇಶದ ಸ್ವಾತಂತ್ರ್ಯಕ್ಕಾಗಿ ಒಂದು ದಿನವೂ ಹೋರಾಡದೆ ಸ್ವಾತಂತ್ರ್ಯ ನಮ್ಮದು ಎಂದು ಹೇಳಿಕೊಳ್ಳುತ್ತಿರುವವರು ಬ್ರಿಟೀಷರಿಗೆ ಏಜೆಂಟರಾಗಿದ್ದರು. ದೇಶಕ್ಕಾಗಿ ಬಿಜೆಪಿ.ಯ ಬಿಡಿಗಾಸಿನ ಕೊಡುಗೆಯಿಲ್ಲ. ವಿಭಿದ್ರಕಾರಕ ಶಕ್ತಿಗಳನ್ನು ಎದುರಿಸಬೇಕಿದೆ. ಭಾರತ, ಭಾರತೀಯರು, ರಾಜ್ಯಾಂಗವನ್ನು ಉಳಿಸುವ ಹೊಣೆಗಾರಿಕೆ ಪ್ರತಿಯೊಬ್ಬ ಕಾಂಗ್ರೆಸ್‌ನವರ ಮೇಲಿದೆ ಎಂದು ಕಾರ್ಯಕರ್ತರನ್ನು ಜಾಗೃತಿಗೊಳಿಸಿದ ಹೆಚ್.ಹನುಮಂತಪ್ಪ ರಾಜ್ಯಾಂಗ ನಮ್ಮದು ಎಂದು ಕೋಮುವಾದಿಗಳನ್ನು ಎಚ್ಚರಿಸಿ ಎಂದು ತಾಕೀತು ಮಾಡಿದರು.

ವಿಧಾನಪರಿಷತ್ ಮಾಜಿ ಸದಸ್ಯೆ ಜಯಮ್ಮ ಬಾಲರಾಜ್ ಮಾತನಾಡಿ ಮಹಾತ್ಮಗಾಂಧಿ ಹಾಗೂ ಲಾಲ್‌ಬಹದ್ದೂರ್‌ಶಾಸ್ತ್ರಿ ಇವರುಗಳು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ದಿನಗಳನ್ನು ಪ್ರತಿಯೊಬ್ಬರು ನೆನಪಿಸಿಕೊಳ್ಳಬೇಕು. ದೇಶದ ಪ್ರಧಾನಿಯಾಗಿದ್ದ ಲಾಲ್‌ಬಹದ್ದೂರ್‌ಶಾಸ್ತ್ರಿ ಜೈಜವಾನ್, ಜೈಕಿಸಾನ್ ಎನ್ನುವ ಸ್ಲೋಗನ್ ಹೊರಡಿಸಿದರು. ಸ್ವಾತಂತ್ರ್ಯಕ್ಕಾಗಿ ಅನೇಕ ಹಿರಿಯರು ಪ್ರಾಣ ತ್ಯಾಗ ಮಾಡಿದ್ದಾರೆ. ಗಾಂಧಿಜಿ ಲಂಡ್‌ನ್‌ನಲ್ಲಿ ಶಿಕ್ಷಣ ಪಡೆದು ಬ್ಯಾರಿಸ್ಟರ್ ಆಗಿದ್ದರು. ಸತ್ಯ ಮತ್ತು ಅಹಿಂಸೆಯ ಮೂಲಕ ಬ್ರಿಟೀಷರ ವಿರುದ್ಧ ಹೋರಾಡಿ ದೇಶವನ್ನು ದಾಸ್ಯದಿಂದ ಮುಕ್ತಿಗೊಳಿಸಿದರು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡುತ್ತ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದೆ ಕಾಂಗ್ರೆಸ್. ಗಾಂಧಿ ಬಗ್ಗೆ ಕೆಲವರು ಹಗುರವಾಗಿ ಮಾತನಾಡುತ್ತಾರೆ. ಆಫ್ರಿಕಾಕ್ಕೆ ಹೋಗಿದ್ದಾಗ ಗಾಂಧಿ ಅನೇಕ, ಅವಮಾನ, ನೋವು, ಸಂಕಟಗಳನ್ನು ಅನುಭವಿಸಿ ನಂತರ ಭಾರತಕ್ಕೆ ಬಂದು ಬ್ರಿಟೀಷರ ವಿರುದ್ಧ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ಸಂವಿಧಾನಕ್ಕೆ ಅಪಚಾರವೆಸಗುತ್ತಿರುವವರು ದೇಶ ಆಳುತ್ತಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಕೇಂದ್ರದಲ್ಲಿ ಅಧಿಕಾರಕ್ಕೆ ತರಬೇಕಿದೆ. ಈ ನಿಟ್ಟಿನಲ್ಲಿ ಕಾರ್ಯಕರ್ತರು ಈಗಿನಿಂದಲೆ ಪಕ್ಷದ ಗೆಲುವಿಗೆ ಶ್ರಮಿಸುವಂತೆ ಕರೆ ನೀಡಿದರು.ಜೈಜವಾನ್, ಜೈಕಿಸಾನ್ ಎನ್ನುವ ಸ್ಲೋಗನ್ ಕೊಟ್ಟ ಲಾಲ್‌ಬಹದ್ದೂರ್‌ಶಾಸ್ತ್ರಿ, ಹಾಗೂ ರಾಷ್ಟ್ರಪಿತ ಮಹಾತ್ಮಗಾಂಧಿರವರ ತತ್ವಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ. ಹಾಲಸ್ವಾಮಿ,ಪ್ರಧಾನಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್. ಮೈಲಾರಪ್ಪ, ಶ್ರೀಮತಿ ರೇಣುಕಶಿವು, ಉಪಾಧ್ಯಕ್ಷ ಶಬ್ಬೀರ್‌ಅಹಮದ್, ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಶ್ರೀಮತಿ ಗೀತ ನಂದಿನಿಗೌಡ, ನಗರಸಭೆ ಮಾಜಿ ಉಪಾಧ್ಯಕ್ಷ ಎನ್.ಬಿ.ಟಿ.ಜಮೀರ್, ಮೆಹಬೂಬ್‌ಖಾತೂನ್, ಇಂಟೆಕ್ ಜಿಲ್ಲಾಧ್ಯಕ್ಷ ಅಶೋಕ್‌ನಾಯ್ಡು, ಚಂದ್ರಣ್ಣ, ಕಾಂಗ್ರೆಸ್ ಎಸ್.ಟಿ.ವಿಭಾಗದ ಜಿಲ್ಲಾಧ್ಯಕ್ಷ ಹೆಚ್.ಅಂಜಿನಪ್ಪ, ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್, ಸೈಯದ್ ಖಿದ್ದೂಸ್, ಪ್ರಕಾಶ್ ರಾಮನಾಯ್ಕ, ಫೈಲ್ವಾನ್ ತಿಪ್ಪೇಸ್ವಾಮಿ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ಡಾ.ರಹಮತ್‌ವುಲ್ಲಾ, ಚಾಂದ್‌ಪೀರ್, ಕಾಂಗ್ರೆಸ್ ನಗರ ಘಟಕದ ಉಪಾಧ್ಯಕ್ಷ ಡಿ.ಆರ್.ಲೋಕೇಶ್ವರಪ್ಪ, ಡಿ.ಕುಮಾರ್ ಪಿಳ್ಳೆಕೆರನಹಳ್ಳಿ,ಗ್ರಾಮಾಂತರಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ನ್ಯಾಯವಾದಿ ಸುದರ್ಶನ್ ಈ ಸಂದರ್ಭದಲ್ಲಿದ್ದರು.

ಫಾಸ್ಟ್ ನ್ಯೂಸ್

ಬೆಂಗಳೂರು ಗ್ರಾಮಾಂತರ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

» ಚಿತ್ರದುರ್ಗ

ಯು ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2023–24ನೇ ಸಾಲಿನ ಬೆಂಗಳೂರು ಗ್ರಾಮಾಂತರ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ವಿವಿಧ ಜಿಲ್ಲೆಗಳಲ್ಲಿ ವಿವಿಧ ಕ್ರೀಡೆಗಳನ್ನು ಏರ್ಪಡಿಸಲಾಗಿದೆ.ಕ್ರೀಡೆಗಳು ಹಾಗೂ ಜಿಲ್ಲೆಗಳ ವಿವರ: ಅಕ್ಟೋಬರ್ 3 ರಂದು ಬೆಳಿಗ್ಗೆ 9 ಗಂಟೆಯೊಳಗಾಗಿ ಹೊಸದುರ್ಗ ತಾಲ್ಲೂಕಿನ ಹೊಸದುರ್ಗ ತಾಲ್ಲೂಕು ಕ್ರೀಡಾಂಗಣದಲ್ಲಿ ಈಜು ಸ್ಪರ್ಧೆಗೆ ನಡೆಯಲಿದೆ, ಅ. 4 ರಂದು ಬೆಳಿಗ್ಗೆ 9 ಗಂಟೆಯೊಳಗಾಗಿ ಚಿತ್ರದುರ್ಗದ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಟೇಬಲ್ ಟೆನ್ನಿಸ್, ಬಾಲ್ ಬ್ಯಾಡ್ಮಿಂಟನ್, ಥ್ರೋಬಾಲ್ ಕ್ರೀಡೆಗಳು ನಡೆಯಲಿದೆ. ಅ. 4ರಂದು ಬೆಳಿಗ್ಗೆ 8 ಗಂಟೆಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ, ಸೂಲಿಬೆಲೆ ಮುಖ್ಯರಸ್ತೆ, ಸಿವಿಲ್ ಕೋರ್ಟ್ ಮುಂಭಾಗದ ದೇವನಹಳ್ಳಿ ಟೌನ್ ಕ್ರೀಡಾಂಗಣದಲ್ಲಿ ಹ್ಯಾಂಡ್‌ಬಾಲ್ ಮತ್ತು ನೆಟ್‌ಬಾಲ್ ಕ್ರೀಡೆಗಳು ನಡೆಯಲಿದೆ. ಅ.5 ಮತ್ತು 6 ರಂದು ಬೆಳಿಗ್ಗೆ 8 ಗಂಟೆಯಿಂದ ತುಮಕೂರು ಜಿಲ್ಲೆಯ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಟೆಕ್ವಾಂಡೋ, ಜಿಮ್ನಾಸ್ಟಿಮ್, ವುಷು, ಕಬಡ್ಡಿ ಕ್ರೀಡೆಗಳು ನಡೆಯಲಿವೆ. ಅ. 5 ಮತ್ತು 6 ರಂದು ಬೆಳಿಗ್ಗೆ 8 ಗಂಟೆಯೊಳಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿ ಕ್ರೀಡೆ ನಡೆಯಲಿದೆ. ಅ. 6 ರಂದು ಬೆಳಿಗ್ಗೆ 9 ಗಂಟೆಯಿಂದ ದಾವಣಗೆರೆ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಖೋಖೋ, ಬ್ಯಾಸ್ಕೇಟ್ ಬಾಲ್ ಮತ್ತು ಕುಸ್ತಿ ಕ್ರೀಡೆಗಳು ನಡೆಯಲಿವೆ. ಅ.6 ಮತ್ತು 7 ರಂದು ಬೆಳಿಗ್ಗೆ 9 ಗಂಟೆಯಿಂದ ಶಿವಮೊಗ್ಗ ಜಿಲ್ಲೆಯ ನೆಹರೂ ಜಿಲ್ಲಾ ಕ್ರೀಡಾಂಗಣದಲ್ಲಿ ಯೋಗ, ವಾಲಿಬಾಲ್, ಬ್ಯಾಡ್ಮಿಂಟನ್ ಮತ್ತು ಟೆನ್ನಿಸ್ ಕ್ರೀಡೆಗಳು ನಡೆಯಲಿವೆ. ಸೆಪ್ಟೆಂಬರ್ 23 ಮತ್ತು 24 ರಂದು ಚಿತ್ರದುರ್ಗ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಮತ್ತು ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ಪುರುಷ ಮತ್ತು ಮಹಿಳಾ ಕ್ರೀಡಾಪಟುಗಳು ಬೆಂಗಳೂರು ಗ್ರಾಮಾಂತರ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹತೆಯನ್ನು ಪಡೆದಿರುತ್ತಾರೆ.

ನಿರಾಶ್ರಿತರಿಗೆ ಕಾನೂನು ಅರಿವು ನೆರವು, ಮಾನಸಿಕ ಆರೋಗ್ಯ ತಪಾಸಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಗೋನೂರು ಸಮೀಪದ ಹೋ.ಚಿ.ಬೋರಯ್ಯ ಬಡಾವಣೆಯ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಶನಿವಾರ ನಿರಾಶ್ರಿತರಿಗೆ ಕಾನೂನು ಅರಿವು ನೆರವು ಹಾಗೂ ಮಾನಸಿಕ ಆರೋಗ್ಯ ತಪಾಸಣಾ ಶಿಬಿರ ನಡೆಯಿತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಿರಾಶ್ರಿತರ ಪರಿಹಾರ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ "ನಿರಾಶ್ರಿತರಿಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಹಾಗೂ ಮಾನಸಿಕ ಆರೋಗ್ಯ ತಪಾಸಣಾ ಶಿಬಿರವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉದ್ಘಾಟಿಸಿದರು. ನಂತರ ನಿರಾಶ್ರಿತರನ್ನು ಕುರಿತು ಮಾತನಾಡಿದ ಅವರು,ಮನ ಪರಿವರ್ತನೆ ಮೂಲಕ ತಮ್ಮ–ತಮ್ಮ ಮನೆಗಳನ್ನು ಸೇರಲು ನಾವು ಯಾವುದೇ ನೆರವು ಮಾಡಲು ಸಿದ್ಧರಿದ್ದೇವೆ ಹಾಗೂ ನಿರಾಶ್ರಿತರು ಮನೆ ಪರಿವರ್ತನೆಯಾಗಿ ಮನೆ ಸೇರಲಿ ಎಂದು ಬಯಸುತ್ತೇವೆ ಎಂದು ಆಶಯ ವ್ಯಕ್ತಪಡಿಸಿದರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ನಿರಾಶ್ರಿತರಿಗೆ ಮಾನಸಿಕ ಅಸ್ವಸ್ಥ ಸ್ಥಿತಿಯಲ್ಲಿದ್ದವರನ್ನು ಚಿಕಿತ್ಸೆ ನೀಡಿ ಇವರುಗಳನ್ನು ಮುಖ್ಯ ವಾಹಿನಿಗೆ ತರುವುದೇ ನಮ್ಮ ಉದ್ದೇಶ ಎಂದರು ತಿಳಿಸಿದರು. ಚಿಕ್ಕಗೊಂಡನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿ ಡಾ.ಮಂಜುನಾಥ್ ಮಾತನಾಡಿ, ಮಾನಸಿಕ ಅಸ್ವಸ್ಥರನ್ನು ಸುಧಾರಿಸುತ್ತಿರುವ ಸಿಬ್ಬಂದಿಗಳಿಗೆ ಧನ್ಯವಾದಗಳನ್ನು ತಿಳಿಸಿ, ನಿಮ್ಮ ತಾಳ್ಮೆ ಮತ್ತು ಸಹನೆಯಿಂದ ಇವರುಗಳು ಬೇಗ ಗುಣಮುಖರನ್ನಾಗಿ ಮಾಡಿ ಮುಖ್ಯವಾಹಿನಿಗೆ ತರುವುದು ನಮ್ಮ ಉದ್ದೇಶವಾಗಿರುತ್ತದೆ ಎಂದರು.

ಹೊಸದುರ್ಗ ಪಟ್ಟಣದ ಶ್ರಮಜೀವಿ ಗೆಳೆಯರ ಬಳಗದಿಂದ ಗಾಂಧಿ ಜಯಂತಿ ಕಾರ್ಯಕ್ರಮದ ಅಂಗವಾಗಿ ಸೋಮವಾರ ಶ್ರಮದಾನ ಹಾಗೂ ಸ್ವಚ್ಛತಾ ಕಾರ್ಯಕ್ರವನ್ನ ಹಮ್ಮಿಕೊಳ್ಳಲಾಗಿತ್ತು ಈ ಸಂಧರ್ಬದಲ್ಲಿಉದ್ಯಮಿ ಡಿ.ಎಸ್.ಪ್ರದೀಪ್‌ಸದ್ಗುರು, ತಾಲೂಕು ಬಿಜೆಪಿ ಅಧ್ಯಕ್ಷ ಗೂಳಿಹಟ್ಟಿಜಗದೀಶ್, ನಾಗರಾಜ್,ರಾಮಚಂದ್ರಪ್ಪ ಉಪಸ್ಥಿತರಿದ್ದರು.

ಹೊಳಲ್ಕೆರೆ ಪತ್ರಕರ್ತರ ಭವನದಲ್ಲಿ ಗಾಂಧಿ ಜಯಂತಿ

» ಹೊಳಲ್ಕೆರೆ

ತಾಲ್ಲೂಕಿನ ಪತ್ರಕರ್ತರ ಭವನದಲ್ಲಿ ಮಹಾತ್ಮ ಗಾಂಧಿ ಹಾಗೂ ಲಾಲ್ ಬಹಾದ್ದೂರ್ ಶಾಸ್ತ್ರಿ ಜಯಂತಿ ಆಚರಿಸಲಾಯಿತು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವ ವಿದ್ಯಾನಿಲಯ ಮುಖ್ಯಸ್ಥರಾದ ಸುಮಿತ್ರಾಕ್ಕಾ ಪಾಲ್ಗೊಂಡು, ಮಹಾತ್ಮ ಗಾಂಧಿ ಜಿ ಬಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿ, ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಈ ದೇಶ ಅತ್ಯುನ್ನತ ವ್ಯಕ್ತಿಗಳು. ದೇಶದ ಸ್ವತಂತ್ರಕ್ಕಾಗಿ ಅವಿರತವಾಗಿ ದುಡಿದ ಮಹಾನ್ ಚೇತನಗಳು. ಮಹಾತ್ಮ ಗಾಂಧೀಜಿಯವರ ಅಹಿಂಸಾ ತತ್ವಗಳು ದೇಶದ ಸ್ವಾತಂತ್ರಕ್ಕಾಗಿ ಹೋರಾಟ ನಡೆಸಲು ಕಾರಣವಾಗಿದೆ. ಭಾರತ ದೇಶವನ್ನು ಸ್ವಾತಂತ್ರ ಗೊಳಿಸಿ, ರಾಮ ರಾಜ್ಯ ಕಟ್ಟುವ ಕನಸನ್ನು ಕಟ್ಟಿದ್ದ ಮಹಾತ್ಮ ಗಾಂಧೀಜಿಯವರ ಜಯಂತಿಯಂದು ನಾವು ಅವರ ಮಾರ್ಗದರ್ಶನವನ್ನು ಬದುಕಿಗೆ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಲಾಲ್ ಬಹದ್ದೂರ್ ಶಾಸ್ತ್ರಿ ದೇಶದ ಪ್ರಧಾನಿಯಾಗಿ ದಕ್ಷ ಹಾಗೂ ಪ್ರಾಮಾಣಿಕ ರಾಜಕಾರಣಿಯಾಗಿ ದೇಶದ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಅವರ ಸ್ಮರಣೆ ನಿರಂತರವಾಗಿ ನಡೆಯಬೇಕಾಗಿದೆ ಎಂದು ತಿಳಿಸಿದರು.

ವಕೀಲರಾದ ಎಸ್. ವೇದಮೂರ್ತಿ ಮಾತನಾಡಿ, ಮಹಾತ್ಮ ಗಾಂಧೀಜಿ ವಿಶ್ವ ನಾಯಕ, ವಿಶ್ವದ ಎಲ್ಲೆಡೆ ತಮ್ಮದೇ ಆದ ಶಾಂತಿ ಮಂತ್ರದ ಮೂಲಕ ಶಾಂತಿ ಸಂದೇಶವನ್ನು ಬಿತ್ತರಿಸಿದ್ದಾರೆ.

ಮಹಾತ್ಮ ಗಾಂಧೀಜಿ ಭಾರತ ದೇಶದ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಸ್ವಾತಂತ್ರ ಭಾರತವನ್ನು ಕಟ್ಟುವಲ್ಲಿ ಹೋರಾಟ ನಡೆಸಿದ್ದಾರೆ. ಅವರ ಶಾಂತಿ ಮಂತ್ರ ಪ್ರತಿಯೊಬ್ಬರು ಬದುಕಿಗೆ ಅಳವಡಿಸಿಕೊಳ್ಳಬೇಕು. ದೇಶದ ಕಲ್ಯಾಣಕ್ಕಾಗಿ ಪ್ರತಿಯೊಬ್ಬರು ಮಹಾತ್ಮ ಗಾಂಧೀಜಿ ಸಲ್ಲಿಸಿರುವ ಸೇವೆಯನ್ನಸ್ಮರಿಸಿಕೊಳ್ಳಬೇಕು.ಲಾಲ್‌ಬಹದ್ದೂರ್ ಶಾಸ್ತ್ರಿಜಿ, ಶ್ರೇಷ್ಠ ರಾಜಕಾರಣಿಯಾಗಿ ದೇಶದ ಅತ್ಯುತ್ತಮ ಪ್ರಧಾನಿಯಾಗಿ ಕೆಲಸ ಮಾಡಿದ್ದಾರೆ. ಅವರ ದಕ್ಷತೆ ಪ್ರಾಮಾಣಿಕತೆಯನ್ನು ಇಂದಿನ ರಾಜಕಾರಣಿಗಳು ಅಳವಡಿಸಿಕೊಳ್ಳಬೇಕು. ನಿಸ್ವಾರ್ಥ ಸೇವೆಯಿಂದ ರಾಜಕಾರಣ ಮಾಡಬೇಕು. ಎನ್ನುವ ಸಂದೇಶವನ್ನು ಅರಿತುಕೊಳ್ಳಬೇಕು ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷ ಚಿತ್ತಪ್ಪ ಮಾತನಾಡಿದರು ಸಂಘದ ಸದಸ್ಯರಾದ ನಿಶಾಮನ್ ಹರ್, ತಾಲೂಕು ಪತ್ರಕ ವಿತರಕರ ಸಂಘದ ಅಧ್ಯಕ್ಷ ನಾಗರಾಜ್, ಹಿರಿಯ ಪತ್ರಕರ್ತ ಹಸನ್ ಸಾಬ್, ಪತ್ರಕರ್ತರಾದ ಅನಂತ, ಜಯಪ್ರಕಾಶ್, ಸುರೇಶ್ ಹಾಗೂ ನಿರಂಜನ್, ಲೋಹಿತ್ ಆಚಾರ್ , ಶಶಾಂಕ್ ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ದಾವಣಗೆರೆ ವತಿಯಿಂದ ಗಾಂಧಿ ಜಯಂತಿ ಯಂದು ಎಪಿಎಂಸಿ ಸ್ವಚ್ಛತಾ ಕೆಲಸಗಾರರಿಗೆ ಸನ್ಮಾನ ಮಾಡಿ ಗೌರವಿಸಲಾಹಿತು. ಸೆಪ್ಟೆಂಬರ್ 15 ರಿಂದ ಎಪಿಎಂಸಿ ಯ ಪ್ರಾಂಗಣದಲ್ಲಿ ಸ್ವಚ್ಛತೆ ಆಂದೋಲನ ಗಿಡನೆಡುವ ಕಾರ್ಯಕ್ರಮ ತರಕಾರಿ ಮಾರುಕಟ್ಟೆ ಯಲ್ಲಿ ಸ್ವಚ್ಛತೆ ಬಗ್ಗೆ ಜನಗಳಿಗೆ ಅರಿವು ಮೂಡಿಸುವುದು ಚಿಠಿಟಛಿ ಕಾರ್ಯದರ್ಶಿಯಾದ ಊಅಒ ರಾಣಿ ಯವರ ಅಧ್ಯಕ್ಷತೆ ನಡೆಹಿತು ಸ್ವಚ್ಛತಾ ಕಾರ್

ಗಾಂಧಿ ಕನಸು ಸ್ವಚ್ಛ ಭಾರತ: ಬಸವಂತಪ್ಪ

» ದಾವಣಗೆರೆ

ಗಾಂಧೀಜಿಯವರ ಕನಸು ಸ್ವಚ್ಛ ಭಾರತವಾಗಿದ್ದು ಪ್ರಾಮಾಣಿಕವಾಗಿ ಇದನ್ನು ಅನುಷ್ಠಾನ ಮಾಡಬೇಕಾಗಿರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಗಾಂಧಿ ಭವನದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಮಹಾತ್ಮ ಗಾಂಧಿ 154 ನೇ ಜಯಂತಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಜಯಂತಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಯಾವ ರೀತಿ ದಿನನಿತ್ಯ ನಗರದ ಸ್ವಚ್ಛತೆಯನ್ನು ಕೈಗೊಳ್ಳಲಾಗುತ್ತದೆ, ಅದೇ ಮಾದರಿಯಲ್ಲಿ ಗ್ರಾಮಾಂತರ ಪ್ರದೇಶ ಪಂಚಾಯಿತಿ ಮಟ್ಟದಲ್ಲಿ ನಡೆಯುವಂತಾಗಬೇಕು.ಗಾಂಧಿಜಿಯವರು ದೇಶದ ರಾಷ್ಟ್ರಪಿತ ಇವರನ್ನು ಮಹಾತ್ಮ ಎಂದೇ ಕರೆಯಲಾಗುತ್ತದೆ. ಎಲ್ಲರೂ ಮಹಾತ್ಮರಾಗಲು ಸಾಧ್ಯವಿಲ್ಲ, ಗಾಂಧಿಯನ್ನು ಮಾತ್ರ ಈ ಸ್ಥಾನದಲ್ಲಿ ನೋಡಲು ಸಾಧ್ಯ ಎಂದ ಅವರು ಲಾಲ್ ಬಹದ್ದೂರ್ ಶಾಸ್ತ್ರಿಯವರು ಗೃಹ, ರೈಲ್ವೆ ಸಚಿವರಾಗಿ ನಂತರ ದೇಶದ ಎರಡನೇ ಪ್ರಧಾನಿಯಾಗಿ ದಕ್ಷ, ಪ್ರಾಮಾಣಿಕತೆಯಿಂದ ಆಡಳಿತ ನಡೆಸಿದರು, ಅವರ ಸೇವೆಯು ಸ್ಮರಣೀಯವಾದುದು ಎಂದರು.

ವಿವಿಧತೆಯನ್ನು ಹೊಂದಿರುವ ದೇಶ ಸರ್ವಧರ್ಮಿಯರನ್ನು ಒಳಗೊಂಡಿದೆ. ಯಾವ ಧರ್ಮ ಸಮಾನತೆ, ಮಾನವೀಯ ಮೌಲ್ಯವನ್ನು ಹೊಂದಿದೆ, ಅದುವೇ ಶ್ರೇಷ್ಠ ಧರ್ಮವಾಗುತ್ತದೆ ಎಂದರು.

ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ಅವರು ಗಾಂಧಿ ಮತ್ತು ಶಾಸ್ತ್ರಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಚರಕದಲ್ಲಿ ನೂಲುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ದೇಶಕ್ಕೆ ತಮ್ಮ ಬದುಕನ್ನೆ ಮುಡುಪಾಗಿಟ್ಟವರು ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರಾಗಿದ್ದುಸರ್ವಧರ್ಮ ಸಮಾನತೆ ಸಂದೇಶವನ್ನು ದೇಶಕ್ಕೆ ನೀಡಿದ್ದಾರೆ. ಗಾಂಧಿ ಕೇವಲ ಭಾರತಕ್ಕಲ್ಲಾ ವಿಶ್ವ ಕಂಡ ಶಾಂತಿ ಧೂತರಾಗಿದ್ದರು. ಅವರ ಸತ್ಯ, ಶಾಂತಿ, ಅಹಿಂಸಾ ಮಾರ್ಗ ಜಗತ್ತಿಗೆ ಮಾದರಿಯಾದದು. ಇವರನ್ನು ಮಹಾಪುರುಷ ಮತ್ತು ಯುಗ ಪುರುಷನೆಂದೇ ಕರೆಯಲಾಗುತ್ತದೆ ಎಂದರು.

ಗಾಂಧಿ ಮಾರ್ಗದಲ್ಲಿ ನಡೆದ ಭಾರತ ದಕ್ಷಿಣ ಏಷ್ಯದಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಿರುವಂತಹ ದೇಶದ ಹೆಸರಿಗೆ ಸೇರಲ್ಪಟ್ಟಿದೆ. ಗಾಂಧಿಯವರ ಬದುಕಿನ ಆದರ್ಶಗಳನ್ನು ಪ್ರಸ್ತುತ ಮತ್ತು ಮುಂದಿನ ಪೀಳಿಗೆಗೂ ಕೊಂಡೊಯ್ಯಬೇಕಾಗಿದೆ. ಶಾಂತಿ, ಅಹಿಂಸಾ ಮಾರ್ಗ ಮತ್ತು ಸತ್ಯವನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಗಾಂಧಿ ಕನಸು ನನಸಾಗುತ್ತದೆ ಎಂದರು.

ಹಿರಿಯ ಪತ್ರಕರ್ತರಾದ ಜಿ.ಎಸ್. ಉಜ್ಜಿನಪ್ಪ ಗಾಂಧಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಕುರಿತಂತೆ ಉಪನ್ಯಾಸ ನೀಡಿ ಗಾಂಧೀಜಿಯವರ ಅಹಿಂಸಾತ್ಮಕ ಹೋರಾಟ, ತ್ಯಾಗ ಬಲಿದಾನದಿಂದಲೇ ನಮ್ಮ ದೇಶಕ್ಕೆ ಸ್ವಾತಂತ್ರ್ಯ ದೊರೆಯಿತು. ಭಾರತಕ್ಕೆ ಸ್ವಾತಂತ್ರ್ಯ ದೊರಕಿಸಲು ಸತ್ಯ, ಅಹಿಂಸೆ, ಉಪವಾಸ ಚಳುವಳಿಗಳೇ ಗಾಂಧೀಜಿಯವರಿಗೆಪ್ರಬಲಅಸ್ತ್ರವಾಗಿದ್ದವು. ಸ್ವದೇಶಿ ವಸ್ತುಗಳ ಬಳಕೆಯಿಂದಲೇ ದೇಶ ಸ್ವಾವಲಂಭಿಯಾಗಲು ಸಾಧ್ಯ ಎಂದು ಪ್ರತಿಪಾದಿಸಿದ್ದ ಗಾಂಧೀಜಿಯವರು, ಗ್ರಾಮೀಣ ಪ್ರದೇಶಗಳಲ್ಲಿಯೇ ದೇಶದ ಉನ್ನತಿ ಹಾಗೂ ಅಭಿವೃದ್ಧಿ ಅಡಗಿದೆ ಎಂದು ಸಾರಿದ್ದರು. ಗಾಂಧೀಜಿಯವರ ಚಿಂತನೆಗೆ ಪೂರಕವಾಗಿ ಬದುಕಿದರೆ, ಇಡೀ ನಾಡೇ ಗೌರವಿಸಲಿದೆ. ಎಲ್ಲ ಸಂಪತ್ತು ಇದ್ದರೂ, ಬಡತನವನ್ನೇ ತಮ್ಮ ಮೇಲೆ ಹೇರಿಕೊಂಡು, ಏನೂ ಇಲ್ಲದಂತೆ ಬದುಕಿದ ಸಂತರು ಗಾಂಧೀಜಿಯವರು. ಅವರ ಸರ್ವೋದಯ, ಸಮನ್ವಯತೆಯ ತತ್ವ ಎಂದೆಂದಿಗೂ ಪ್ರಸ್ತುತವೆನಿಸಲಿದೆ. ಶಾಸ್ತ್ರಿಯವರು ಜೈ ಜವಾನ್ ಜೈ ಕಿಸಾನ್ ಸಂದೇಶವನ್ನು ನೀಡಿದವರಾಗಿದ್ದು ದೇಶ ಕಂಡ ದಕ್ಷ, ಪ್ರಾಮಾಣಿಕ ಪ್ರಧಾನಿಯಾಗಿದ್ದಾರೆ ಎಂದರು.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಅವರು ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಯವರ ಕುರಿತಂತೆ ತಮ್ಮ ಸಂದೇಶವನ್ನು ಕಳುಹಿಸಿದ್ದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಸಂದೇಶ ತಿಳಿಸಿ ದೇಶದ ಪ್ರತಿಯೊಬ್ಬರ ಮನಸ್ಸಿನಲ್ಲಿ ಹಾಸುಹೊಕ್ಕಾಗಿರುವ ಗಾಂಧೀಜಿಯವರು ಇಡೀ ವಿಶ್ವಕ್ಕೆ ಆದರ್ಶ ಪ್ರಾಯರು. ಚಾರಿತ್ರ್ಯವಿಲ್ಲದ ಶಿಕ್ಷಣ, ದುಡಿಮೆಯಿಲ್ಲದ ಸಂಪತ್ತು, ಆತ್ಮಸಾಕ್ಷಿ ಇಲ್ಲದ ಸಂತೋಷ, ತತ್ವರಹಿತವಾದ ರಾಜಕಾರಣ, ನೀತಿ ಇಲ್ಲದ ವ್ಯಾಪಾರ, ಮಾನವೀಯತೆ ಇಲ್ಲದ ಜ್ಞಾನ, ತ್ಯಾಗವಿಲ್ಲದ ಪೂಜೆ ಎಲ್ಲವೂ ವ್ಯರ್ಥ. ಇವುಗಳನ್ನು ಹೊಂದಿ, ನಮ್ಮ ವ್ಯಕ್ತಿತ್ವವನ್ನು ಪರಿಪೂರ್ಣವಾಗಿಸಿಕೊಳ್ಳಬೇಕು ಎಂದು ಮಹಾತ್ಮ ಗಾಂಧೀಜಿ ಪ್ರತಿಪಾದಿಸಿ ಅದರಂತೆ ಬದುಕಿದ್ದರು. ಅವರು ಹಾಕಿಕೊಟ್ಟ ಹಾದಿಯಲ್ಲಿಯೇ ನಾವೆಲ್ಲರೂ ಸಾಗಿ ಉತ್ತಮ ಪ್ರಜೆಗಳಾಗೋಣ ಎಂದು ಅವರ ಸಂದೇಶ ವಾಚಿಸಿದರು.

ಅಜಯ್ ನಾರಾಯಣ ಮತ್ತು ಸಂಗಡಿಗರು ರಘುಪತಿ ರಾಜಾರಾಂ ಸೇರಿದಂತೆ ಗಾಂಧಿ ಪ್ರಿಯ ಗೀತೆಗಳನ್ನು ಹಾಡಿದರು. ಸಿದ್ದಗಂಗಾ ಶಾಲೆಯ ನಯನ. ಎನ್.ಎಸ್ ಮತ್ತು ಸಿಂಚನ ಕೆ.ಎಂ ಗೀತಾ ಪಠಣ, ರಿದಾ.ಡಿ ಮತ್ತು ಮಷ್ಕುರಾ ಖಾನಂ ಇವರು ಕುರಾನ್‌ನ ಪಠಣ ಹಾಗೂ ಸ್ತುತಿ ಬೈಬಲ್ ಪಠಣ ಮಾಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪ್ರೌಢಶಾಲಾ, ಪದವಿ ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಆಯೋಜಿಸಿದ್ದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಿಗೆ ಪ್ರಥಮ ಮೂರು ಸಾವಿರ, ದ್ವಿತೀಯ ಎರಡು ಸಾವಿರ, ತೃತೀಯ ಒಂದು ಸಾವಿರ ಪ್ರತಿ ವಿಭಾಗದಲ್ಲಿ ನಗದು ಮತ್ತು ಪ್ರಮಾಣ ಪತ್ರಗಳನ್ನು ವಿತರಣೆ ಮಾಡಲಾಯಿತು.

ವಿಜೇತರ ವಿವರ; ಪ್ರೌಢಶಾಲಾ ವಿಭಾಗದಲ್ಲಿ ಹರಿಹರ ತಾ; ಬನ್ನಿಕೋಡು ಕರ್ನಾಟಕ ಪಬ್ಲಿಕ್ ಶಾಲೆ 10 ನೇ ತರಗತಿಯ ಗಗನ ಪ್ರಥಮ, ದಾವಣಗೆರೆ ಉತ್ತರ ವಲಯದ ದೇವಮ್ಮ ಎ.ಆರ್.ಬಿ.ಪ್ರೌಢಶಾಲೆ 10 ನೇ ತರಗತಿ ರೋಹಿಣಿ.ಆರ್ ದ್ವಿತೀಯ, ನ್ಯಾಮತಿ ಕರ್ನಾಟಕ ಪಬ್ಲಿಕ್ ಶಾಲೆ 10 ನೇ ತರಗತಿ ನಂದಿತಾ ಎಸ್.ಸಿ.ವಿ ತೃತೀಯ.

ಪದವಿ ಪೂರ್ವ ವಿಭಾಗ; ದಾವಣಗೆರೆ ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು ದ್ವಿತೀಯ ಪಿ.ಯು.ಸಿ. ರಾಕೇಶ್.ಜಿ ಪ್ರಥಮ, ಸ್ನೇಹ ಕೆ. ದ್ವಿತೀಯ, ಅನಿತಾ. ಎನ್ ತೃತೀಯ ಸ್ಥಾನ ಪಡೆದಿದ್ದಾರೆ.

ಪದವಿ ವಿಭಾಗ; ಧ.ರಾ.ಮ.ವಿಜ್ಞಾನ ಕಾಲೇಜಿನ ತೃತೀಯ ಬಿ.ಎಸ್ಸಿ ರಾಕೇಶ್ ಎ.ಎಂ ಪ್ರಥಮ, ಹರಿಹರದ ಶ್ರೀಮತಿ ಗಿರಿಯಮ್ಮ.ಆರ್.ಕಾಂತಪ್ಪ ಶ್ರೇಷ್ಠಿ ಪ್ರಥಮ ದರ್ಜೆ ಕಾಲೇಜು ಬಿ.ಕಾಂ ವಿದ್ಯಾರ್ಥಿನಿ ಕೀರ್ತಿ.ಇ ದ್ವಿತೀಯ ಮತ್ತು ದಾವಣಗೆರೆ ಮಂಜುನಾಥಸ್ವಾಮಿ ಪ್ರಥಮ ದರ್ಜೆ ಕಾಲೇಜಿನ ಅನುಷಾ ಎಂ ತೃತೀಯ ಸ್ಥಾನ ಪಡೆದಿರುವರು.

ಕಾರ್ಯಕ್ರಮದಲ್ಲಿ ಮಹಾನಗರಪಾಲಿಕೆ ಮೇಯರ್ ವಿನಾಯಕ್ ಪೈಲ್ವನ್, ಜಿ.ಪಂ. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಪಾಲಿಕೆಯ ಆರೋಗ್ಯ ಮತ್ತು ಸ್ಥಾಯಿ ಸಮಿತಿ ಅಧ್ಯಕ್ಷರಾದ ಮೀನಾಕ್ಷಿ ಜಗದೀಶ್, ಪಾಲಿಕೆ ಸದ್ಯಸರಾದ ಹೆಚ್.ನಾಗರಾಜ್, ಪಾಮೇನಹಳ್ಳಿ ನಾಗರಾಜ್, ಉಪಸ್ಥಿತರಿದ್ದರು.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ ಸ್ವಾಗತಿಸಿದರು. ಪೊಲೀಸ್ ಇಲಾಖೆ ದೇವರಾಜ್ ಮತ್ತು ಶೈಲಜ ನಿರೂಪಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ವಂದಿಸಿದರು.

ಫಾಸ್ಟ್ ನ್ಯೂಸ್

ಮಾಜಿ ಸಂಸದ ಚಂದ್ರಪ್ಪ ಹುಟ್ಟುಹಬ್ಬದ ಪ್ರಯುಕ್ತ ಕಾಂಗ್ರೆಸ್ ಕಚೇರಿಯಲ್ಲಿ ಸೀರೆ ವಿತರಣೆ

» ಚಿತ್ರದುರ್ಗ

ಮಾಜಿ ಸಂಸದ ಕೆ.ಪಿ.ಸಿ.ಸಿ. ಕಾರ್ಯಾಧ್ಯಕ್ಷ ಬಿ.ಎನ್.ಚಂದ್ರಪ್ಪನವರ ಹುಟ್ಟುಹಬ್ಬದ ಪ್ರಯುಕ್ತ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಕಾರ್ಯಕರ್ತರು ಕೇಕ್ ಕತ್ತರಿಸಿ ಸಂಭ್ರಮದಿಂದ ಆಚರಿಸಿದರು. ಮೈಸೂರು ಪೇಟ, ಶಾಲು, ಬೃಹಧಾಕಾರವಾದ ಹಾರಗಳನ್ನು ಹಾಕಿ ಕಾರ್ಯಕರ್ತರು ಬಿ.ಎನ್.ಚಂದ್ರಪ್ಪನವರಿಗೆ ಹುಟ್ಟುಹಬ್ಬದ ಶುಭ ಕೋರಿದರು. ಇನ್ನು ಕೆಲವರು ಹೂಗುಚ್ಚಗಳನ್ನು ನೀಡಿ ಶುಭ ಹಾರೈಸಿದರು. ಜನ್ಮದಿನದ ಅಂಗವಾಗಿ ಮಹಿಳೆಯರಿಗೆ ಸೀರೆಗಳನ್ನು ವಿತರಿಸಲಾಯಿತು.ಜಿಲ್ಲಾಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್ ಕುಮಾರ್, ಡಿ.ಎನ್.ಮೈಲಾರಪ್ಪ, ಶ್ರೀಮತಿ ರೇಣುಕಾಶಿವು, ಮಹಿಳಾ ಕಾಂಗ್ರೆಸ್ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್, ಜಿಲ್ಲಾ ಕಾಂಗ್ರೆಸ್ ಕಿಸಾನ್‌ಸೆಲ್ ವಿಭಾಗದ ಅಧ್ಯಕ್ಷ ಎ.ನಾಗರಾಜ್, ಉಪಾಧ್ಯಕ್ಷ ಶಿವಲಿಂ ಗಪ್ಪ, ಎಸ್ಸಿ. ವಿಭಾಗದ ಜಿಲ್ಲಾಧ್ಯಕ್ಷ ಜಯಣ್ಣ, ಸೈಯದ್ ಖುದ್ದೂಸ್, ನಗರಾ ಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ನಗರಸಭೆ ಸದಸ್ಯೆ ಮೀನಾಕ್ಷಿ, ಭಾಗ್ಯಮ್ಮ ಸೇರಿದಂತೆ ನೂರಾರು ಕಾರ್ಯಕರ್ತರು ಆಚರಣೆಯಲ್ಲಿದ್ದರು.

ಹೊಸದುರ್ಗ ಪಟ್ಟಣದ ಕುಂಚಿಟಿಗ ಮಹಾ ಮಠದಲ್ಲಿ ಸೋಮವಾರ ನಡೆದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಗಾಂಧೀಜಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.ಈ ಸಂಧರ್ಬದಲ್ಲಿ ಶ್ರೀ ಮಠದ ಶ್ರೀ ಶಾಂತವೀರಸ್ವಾಮೀಜಿ ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ಹೊಸದುರ್ಗ ಪಟ್ಟಣದ ಶ್ರಮಜೀವಿ ಗೆಳೆಯರ ಬಳಗದಿಂದ ಗಾಂಧಿ ಜಯಂತಿ ಕಾರ್ಯಕ್ರಮದ ಅಂಗವಾಗಿ ಸೋಮವಾರ ಶ್ರಮದಾನ ಹಾಗೂ ಸ್ವಚ್ಛತಾ ಕಾರ್ಯಕ್ರವನ್ನ ಹಮ್ಮಿಕೊಳ್ಳಲಾಗಿತ್ತು ಈ ಸಂಧರ್ಬದಲ್ಲಿಉದ್ಯಮಿಡಿ.ಎಸ್.ಪ್ರದೀಪ್‌ಸದ್ಗುರು, ತಾಲೂಕು ಬಿಜೆಪಿ ಅಧ್ಯಕ್ಷ ಗೂಳಿಹಟ್ಟಿಜಗದೀಶ್,ಸದಸ್ಯರುಗಳಾದ ನಾಗರಾಜ್,ರಾಮಚಂದ್ರಪ್ಪ ಉಪಸ್ಥಿತರಿದ್ದರು.

ಹೊಸದುರ್ಗ ಪಟ್ಟಣದ ಕೃಷಿ ಇಲಾಖೆಯ ಕಛೇರಿಯಲ್ಲಿಸೋಮವಾರ ಗಾಂಧಿ ಜಯಂತಿಯನ್ನ ಆಚರಿಸಲಾಯಿತು.ಈ ಸಂಧರ್ಬದಲ್ಲಿ ಇಲಾಖೆಯ ಸಹಾಯಕ ನಿರ್ಧೆಶಕ ಸಿ.ಎಸ್.ಈಶ ಹಾಗೂ ಸಿಬ್ಬಂಧಿವರ್ಗದವರು ಉಪಸ್ಥಿತರಿದ್ದರು

ಹೊಸದುರ್ಗ ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಹಾಗೂ ಕ್ಷೇತ್ರ ಸಮನ್ವಯ ಕಛೇರಿಯ ಆವರಣದಲ್ಲಿ ಗಾಂಧಿಜಯಂತಿ ಅಂಗವಾಗಿ ಸೋಮವಾರ ಸ್ವಚ್ಛತಾ ಕಾರ್ಯಕ್ರಮ ನಡೆಯಿತು.ಈ ಸಂಧರ್ಬದಲ್ಲಿ ಬಿ.ಇ.ಓ ಸೈಯದ್‌ಮೋಸಿನ್, ಬಿ.ಆರ್.ಸಿ.ಶ್ರೀನಿವಾಸ್, ಭಾಗವಹಿಸಿದ್ದರು.

ಸ್ವಚ್ಛ ಅಭಿಯಾನಕ್ಕೆ ಮಾಜಿ ಶಾಸಕ ತಿಪ್ಪಾರೆಡ್ಡಿ ಚಾಲನೆ

» ಚಿತ್ರದುರ್ಗ

ದೇಶದ ಪ್ರಧಾನಿ ನರೇಂದ್ರಮೋದಿರವರ ಹುಟ್ಟುಹಬ್ಬದ ಅಂಗವಾಗಿ ನಡೆದ ಸೇವಾ ಪಾಕ್ಷಿಕ ಕಾರ್ಯಕ್ರಮದಡಿ ಬಿಜೆಪಿ. ನಗರ ಘಟಕದಿಂದ ಭಾನುವಾರ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

35 ನೇ ವಾರ್ಡಿನ ಐ.ಯು.ಡಿ.ಪಿ. ಬಡಾವಣೆಯಲ್ಲಿರುವ ಗಣಪತಿ ದೇವಸ್ಥಾನದ ಉದ್ಯಾನವನದಲ್ಲಿ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ಪ್ರಧಾನಿ ನರೇಂದ್ರಮೋದಿರವರು ಸ್ವಚ್ಛ ಅಭಿಯಾನಕ್ಕೆ ಚಾಲನೆ ನೀಡಿರುವುದರಿಂದ ಅವರ ಜನ್ಮದಿನದ ಪ್ರಯುಕ್ತ ಸೇವಾಪಾಕ್ಷಿಕ ಅಡಿ ರಕ್ತದಾನ ಶಿಬಿರ, ಗಿಡನೆಡುವುದು, ಉಚಿತ ಆರೋಗ್ಯ ತಪಾಸಣೆ ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳನ್ನು ನಗರದ 35 ವಾರ್ಡ್‌ಗಳಲ್ಲಿಯೂ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ನಗರಾಧ್ಯಕ್ಷ ನವೀನ್ ಚಾಲುಕ್ಯ, ಜಿಲ್ಲಾ ಉಪಾಧ್ಯಕ್ಷ ಸಂಪತ್‌ಕುಮಾರ್, ಶ್ಯಾಮಣ್ಣ, ಶಿವಪ್ರಕಾಶ್, ಮಾಧುರಿ ಗಿರೀಶ್, ನಾಗರಾಜ್‌ಬೇದ್ರೆ, ನಗರಸಭೆ ಸದಸ್ಯರುಗಳಾದ ಶ್ರೀನಿವಾಸ್, ಹರೀಶ್, ಬಿಜೆಪಿ. ಮುಖಂಡರುಗಳಾದ ತಿಮ್ಮಣ್ಣ, ರವಿಕುಮಾರ್, ರಮೇಶ್‌ಆಚಾರ್, ಬಸಮ್ಮ, ಚಂದ್ರು, ರಾಮು, ಅರುಣಕುಮಾರಿ, ಕಿರಣ್, ಶಂಭು ಇನ್ನು ಮುಂತಾದವರು ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಸ್ವಚ್ಛತಾ ಹೀ ಸೇವಾ ಅಭಿಯಾನ

» ಚಿತ್ರದುರ್ಗ

ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಶನಿವಾರ ಸ್ವಚ್ಛತಾ ಹೀ ಸೇವಾ ಅಭಿಯಾನ ಹಮ್ಮಿಕೊಳ್ಳಲಾಯಿತು. ಜಿಲ್ಲಾ ನ್ಯಾಯಾಂಗ ಇಲಾಖೆ, ನಗರಸಭೆ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘದ ವತಿಯಿಂದ ಜಿಲ್ಲಾ ನ್ಯಾಯಾಲಯ ಆವರಣದ ಹೊರಾಂಗಣದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಅಭಿಯಾನ ಕಾರ್ಯರೂಪಕ್ಕೆ ತರಲಾಯಿತು. ಇದಕ್ಕೂ ಮೊದಲು ನಗರದ ಜಿಲ್ಲಾಧಿಕಾರಿ ವೃತ್ತದಲ್ಲಿ ಸ್ವಚ್ಛತೆಯ ಬಗ್ಗೆ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.ನ್ಯಾಯಾಲಯ ಮತ್ತು ಜಿಲ್ಲಾ ಖಜಾನೆ ಮುಂಭಾಗದ ಅಂಗಡಿ ಮುಗ್ಗಟ್ಟುಗಳ ಮಾಲೀಕರಿಗೆ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ರೇಖಾ ತಿಳುವಳಿಕೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ರೇಖಾ, ಅಪರ ಜಿಲ್ಲಾ ನ್ಯಾಯಾಧೀಶರಾದ ಎಸ್.ಎನ್.ಕಲ್ಕಣಿ, ಬಿ.ಕೆ.ಕೋಮಲಾ, ಸಿವಿಲ್ ನ್ಯಾಯಾಧೀಶರಾದ ಕೆಂಪರಾಜು, ಚೈತ್ರಾ, ಉಜ್ವಲಾ ವೀರಣ್ಣ, ಗೀತಾ ಕುಂಬಾರ, ನೇಮಿಚಂದ್ರ, ಅನಿತಾ ಕುಮಾರಿ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ನಗರಸಭೆ ಆಯುಕ್ತೆ ರೇಣುಕಾ, ಸಿಬ್ಬಂದಿ ಜಾಫರ್, ಬಿ.ಎಂ.ಅನಿಲ್ ಕುಮಾರ್ ಹಾಜರಿದ್ದರು.

ಪಿ.ಎಂ ವಿಶ್ವಕರ್ಮ ಯೋಜನೆ ಸೌಲಭ್ಯ, ನೋಂದಾಯಿಸಿ

ದಾವಣಗೆರೆ: ವಿವಿಧ ವೃತ್ತಿಯಲ್ಲಿ ತೊಡಗಿಸಿಕೊಂಡಿರುವ ವೃತ್ತಿಪರ ಕುಶಲಕರ್ಮಿಗಳಿಗೆ ಭಾರತ ಸರ್ಕಾರದ ಹೊಸ ಯೋಜನೆ ಪಿಎಂ ವಿಶ್ವಕರ್ಮ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಈ ಯೋಜನೆಯನ್ನು ಪಡೆಯಲು ಬಡಗಿತನ, ದೋಬಿ, ಕುಲುಮೆ, ಬೀಗ ಮಾಡುವವರು. ಟೈಲರ್, ಮೀನು ಬಲೆ